ಸಂಪುಟ 01 | ಸಂಚಿಕೆ 63 | ಮಂಗಳವಾರ 13 ಜನವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಅಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ಲೋಹ್ರಿ ಹಬ್ಬ

ಲೋಹ್ರಿ ವರ್ಷದ ಮೊದಲ ಹಬ್ಬವಾಗಿದ್ದು, ಇದು ಸುಗ್ಗಿಯ ಋತುವಿನ ಆರಂಭವನ್ನು ಸೂಚಿಸುತ್ತದೆ. ಉತ್ತರ ಭಾರತದಲ್ಲಿ, ಮುಖ್ಯವಾಗಿ ಪಂಜಾಬ್ ಮತ್ತು ಹ-ರಿಯಾಣದಲ್ಲಿ ಇದನ್ನು ಪೂರ್ಣ ಉತ್ಸಾಹದಿಂದ ಆಚ-ರಿಸಲಾಗುತ್ತದೆ. ಲೋಹ್ರಿ ಹಬ್ಬವನ್ನು ಜನವರಿ 13 ಅಥವಾ 14 ರಂದು ದೀಪೋತ್ಸವವನ್ನು ಬೆಳಗಿಸಿ ಸ್ನೇಹಿತರು ಮತ್ತು ಸಂಬಂಧಿಕರೊಂದಿಗೆ ಅದರ ಸುತ್ತಲೂ ನೃತ್ಯ ಮಾಡುವ ಮೂಲಕ ಆಚರಿಸಲಾಗುತ್ತದೆ. ಜನರು ದೀಪೋತ್ಸವದಲ್ಲಿ ಗೋಧಿ ಕಾಂಡ, ಅಕ್ಕಿ, ರೆವ್ರಿ, ಬೆಲ್ಲ ಮತ್ತು ಪಾಪ್‌ಕಾರ್ನ್ ಅನ್ನು ಅರ್ಪಿಸುತ್ತಾರೆ

## ಸುಭಾಷಿತ

ವಿಧೇಯನಾಗಿ ಇರಲು ಕಲಿಯದವನು ಉತ್ತಮ ನಾಯಕ ಆಗಲು ಸಾಧ್ಯವಿಲ್ಲ.

ಅರಿಸ್ಟಾಟಲ್

## ರಾಯಚೂರು ಉತ್ಸವ: ಜನವರಿ 25ರಂದು ಸೈಕ್ಲಿಂಗ್ ಮ್ಯಾರಥಾನ್

❏ ನೈಜ್ಯ ದೇಸೆ ನ್ಯೂಸ್

**ರಾಯಚೂರು: ಜನವರಿ 12 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯಲ್ಲಿ ಜನವರಿ-2026ರ ಮಾಹೆಯಲ್ಲಿ ಜರುಗುವ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ 2026ರ ಕಾರ್ಯಕ್ರಮದಲ್ಲಿ ವಿವಿಧ ಕ್ರೀಡೆಗಳನ್ನು ಆಯೋಜಿಸಲಾಗಿದೆ. ಜನವರಿ 25ರ ಬೆಳಗ್ಗೆ 9 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಸೈಕ್ಲಿಂಗ್ ಮ್ಯಾರಥಾನ್ ಸ್ಪರ್ಧೆ ಆಯೋಜನೆ ಮಾಡಲಾಗಿದೆ.**

ಆಸಕ್ತರು ಈ ಸ್ಪರ್ಧೆಯ ನೋಡಲ್ ಅಧಿಕಾ-ರಿಗಳಾದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರ ಮೊಬೈಲ್ ಸಂಖ್ಯೆ: 9972316898 ಅಥವಾ ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯಶಂಕರ್ ಮೊಬೈಲ್ ಸಂಖ್ಯೆ: 9448427601ಗೆ ಸಂಪರ್ಕಿಸಿ ಹೆಸರು ನೋಂದಾಯಿಸಬಹುದಾಗಿದೆ. ಈ ಕ್ರೀಡೆಗಳಲ್ಲಿ ಆಸಕ್ತರು ಭಾಗವಹಿಸಿ ರಾಯಚೂರು ಜಿಲ್ಲೆ ಹೆಮ್ಮೆಪಡುವಂತಹ ಕ್ರೀಡೋತ್ಸವ ಮೂಡಿಬರಲು ಸಹಕರಿಸಿ ರಾಯಚೂರು ಉತ್ಸವವನ್ನು ಯಶಸ್ವಿಗೊಳಿಸಲು ಎಲ್ಲಾ ಕ್ರೀಡಾಪಟುಗಳು ಮತ್ತು ಸಾರ್ವಜನಿಕರಲ್ಲಿ ವಿನಂತಿಸಿದೆ ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಡುಗಡೆಯಾಗದ ಗೃಹಲಕ್ಷ್ಮಿ ಹಣ ಬೃಹತ್ ಪ್ರತಿಭಟನೆಗೆ ತಯಾರಿ

**ಬೆಂಗಳೂರು: ಗೃಹಲಕ್ಷ್ಮಿ ಹಣ ಬಿಡುಗಡೆ ವಿಳಂಬವಾಗುತ್ತಿರುವುದರ ಹಿನ್ನೆಲೆಯಲ್ಲಿ ಆಡಳಿತರೂಢಾ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ಪ್ರತಿಭಟನೆಗೆ ಸಜ್ಜಾಗಿದ್ದು, ಹುಬ್ಬಳ್ಳಿಯಲ್ಲಿ ಮಹಿಳಾ ಮೋರ್ಚಾ ವತಿಯಿಂದ ಬೃಹತ್ ಸಮಾವೇಶ ನಡೆಸಲು ಮುಂದಾಗಿದೆ. ಮಧ್ಯ ಕರ್ನಾಟಕದ ವಾಣಿಜ್ಯ ರಾಜಧಾನಿ ಹುಬ್ಬಳ್ಳಿಯಲ್ಲಿ ರಾಜ್ಯಮಟ್ಟದ ಬಿಜೆಪಿ ಮಹಿಳಾ ಮೋರ್ಚಾ ಸಮಾವೇಶ ನಡೆಸಲು ಉದ್ದೇಶಿಸಲಾಗಿದ್ದು, ರಾಷ್ಟ್ರೀಯ ಮಹಿಳಾ ಮೋರ್ಚಾ ಅಧ್ಯಕ್ಷರು ಹಾಗೂ ಪ್ರಮುಖರನ್ನು ಆಹ್ವಾನಿಸಲು ತೀರ್ಮಾನಿಸಲಾಗಿದೆ.**

ಆದರೆ ಸಮಾವೇಶ ನಡೆಸುವ ಬಗ್ಗೆ ದಿನಾಂಕ ಈವರೆಗೂ ಅಧಿಕೃತಗೊಂಡಿಲ್ಲ. ಸದ್ಯದಲ್ಲೇ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಪಕ್ಷದ ಪದಾಧಿಕಾರಿಗಳ ಜೊತೆ ಚರ್ಚಿಸಿ ದಿನಾಂಕವನ್ನು ನಿಗದಿಪಡಿಸುವ ಸಂಭವವಿದೆ. ರಾಜ್ಯದಾದ್ಯಂತ ಸುಮಾರು ಒಂದು ಲಕ್ಷಕ್ಕೂ ಹೆಚ್ಚಿನ ಕಾರ್ಯಕರ್ತರನ್ನು ಈ ಸಮಾವೇಶಕ್ಕೆ ಕರೆತರುವ




ಉದ್ದೇಶವನ್ನು ಹಾಕಿಕೊಳ್ಳಲಾಗಿದೆ. ಆ ಮೂಲಕ ಸರ್ಕಾರದ ವೈಫಲ್ಯ ಮತ್ತು ಪಕ್ಷಸಂಘಟನೆಗೂ ಒತ್ತು ಕೊಡುವ ಉದ್ದೇಶವನ್ನು ಬಿಜೆಪಿ ಹೊಂದಿದೆ. ಸಂಪಾದಕೀಯ ಇ-ಪೇಪರ್ ಗೃಹಲಕ್ಷ್ಮಿ ಯೋಜನೆಯಡಿ ಫಲಾನುಭವಿಗಳ ಖಾತೆಗೆ ಹಣ ಬಾರದೇ ಇರುವವರನ್ನು ಸಮಾವೇಶಕ್ಕೆ ಆಹ್ವಾನಿಸಿ ಸಭೆಯಲ್ಲಿ ಅವರ ಮೂಲಕವೇ ಹಣ ತಡೆಹಿಡಿದವರನ್ನು ಬಹಿರಂಗಪಡಿಸುವ ಯೋಜನೆಯೂ ಇದೆ. ಇದಕ್ಕಾಗಿ ಎಷ್ಟು ಕಂತುಗಳಲ್ಲಿ ಹಣ ಬಿಡುಗಡೆಯಾಗಿದೆ ಎಂಬುದನ್ನು ದಾಖಲೆಗಳ ಸಮೇತ ಕಲೆ ಹಾಕಲು ಪಕ್ಷದ ಪ್ರಮುಖರಿಗೆ ಸೂಚಿಸಲಾಗಿದೆ.

ಇತ್ತೀಚೆಗೆ ಬೆಳಗಾವಿಯಲ್ಲಿ ನಡೆದ ಚಳಿಗಾಲ ಅಧಿವೇಶನದಲ್ಲಿ ಶಾಸಕ ಮಹೇಶ್ ಟೆಂಗಿನಕಾಯಿ ಅವರು ಮಹಿಳಾ ಅಭಿವೃದ್ಧಿ ಮತ್ತು ಮಕ್ಕಳ ಕಲ್ಯಾಣ ಖಾತೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಕೇಳಿದ ಪ್ರಶ್ನೆಗೆ ತಪ್ಪು ಮಾಹಿತಿ ಬಂದಿತ್ತು. ಇದು ದೊಡ್ಡ ವಿವಾದವನ್ನೇ ಸೃಷ್ಟಿಸಿತ್ತು. 2025ನೇ ಸಾಲಿನ ಫೆಬ್ರವರಿ ಮತ್ತು ಮಾರ್ಚ್ ತಿಂಗಳ ಹಣವನ್ನು ಫಲಾನುಭವಿಗಳ ಖಾತೆಗೆ ಹಾಕಿರಲಿಲ್ಲ. ಇಂತಿಷ್ಟು ಕಂತು ಹಣವನ್ನು ಫಲಾನುಭವಿಗಳ ಖಾತೆಗೆ ಜಮಾವಣೆ ಮಾಡಲಾಗಿದೆ ಎಂದು ಸಚಿವರು ಸಮರ್ಥನೆ ಮಾಡಿಕೊಂಡಿದ್ದರೂ ಎರಡು ತಿಂಗಳ ಬಾಕಿ ಹಣ ಪಾವತಿ ಮಾಡದಿರುವುದು ಬೆಳಕಿಗೆ ಬಂದಿತ್ತು.

ಆಡಳಿತ ಮತ್ತು ಪ್ರತಿಪಕ್ಷಗಳ ಸದಸ್ಯರ ನಡುವೆ ದೊಡ್ಡ ಜಟಾಪಟಿಯೇ ನಡೆದು ಕೊನೆಗೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಸದನದಲ್ಲಿ ಕ್ಷಮೆ ಕೇಳಿದ್ದರು. ಶೀಘ್ರದಲ್ಲೇ ಹಣ ಬಿಡುಗಡೆ ಮಾಡುವುದಾಗಿ ಸಚಿವರು ಹೇಳಿದ್ದರೂ ಈಗಲೂ ಕೂಡ ಫಲಾನುಭವಿಗಳ ಖಾತೆಗೆ ಹಣ ಸಂದಾಯವಾಗಿಲ್ಲ.

## ಸಮಾಜ ಕಲ್ಯಾಣ ಇಲಾಖೆಯ ಕಚೇರಿ ಬಾಡಿಗೆ ವಿಳಂಬ ಕೋರ್ಟ್ ಆದೇಶ ಸಾಮಗ್ರಿಗಳ ಜಪ್ತಿ



❏ ನೈಜ್ಯ ದೇಸೆ ನ್ಯೂಸ್

**ಸಿಂಧನೂರು: ಸಮಾಜ ಕಲ್ಯಾಣ ಇಲಾಖೆಯ ಕಚೇರಿ ಸಾಮಗ್ರಿಗಳ ಜಪ್ತಿಗೆ ಸಿಂಧನೂರು ಹಿರಿಯ ಶ್ರೇಣಿ ನ್ಯಾಯಾಲಯ ಆದೇಶ ನೀಡಿದ್ದು, ವಸತಿ ನಿಲಯಕ್ಕಾಗಿ ಖಾಸಗಿಯವರ ಕಟ್ಟಡ ಪಡೆದು ಬಾಡಿಗೆ ಪಾವತಿಸದೆ ವಿಳಂಬ ಮಾಡಿದ ಹಿನ್ನೆಲೆಯಲ್ಲಿ ಸೋಮವಾರದಂದು ಕಚೇರಿಯ ಎಲ್ಲಾ ಸಾಮಗ್ರಿಗಳನ್ನು ಸಹ ಜಪ್ತಿ ಮಾಡಲಾಯಿತು.**

ಪ್ರಕರಣದ ಹಿನ್ನೆಲೆ ಕಂಪ್ಯೂಟ-ರ್, ಟೇಬಲ್, ಚೇರ್, ಹಾಗೂ ಇನ್ನತರೆ ಸಾಮಗ್ರಿಗಳನ್ನು ಕಚೇರಿಯಿಂದ ಹೊರ ಹಾಕಲಾಯಿತು. ನಗರದ ಖಾಜಾಸಾಬ್ ತಂದೆ ಶಂಶುರ್ ಸಾಬ್ ಎಂಬುವವರು ಮಹೆಬೂಬಿಯಾ ಕಾಲೋನಿಯಲ್ಲಿರುವ ತಮ್ಮ ಕಟ್ಟಡವನ್ನು ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಕ್ಕಾಗಿ ಬಾಡಿಗೆಗೆ ಕೊಟ್ಟಿದ್ದರು. ಆದ-ರೆ ಸಮಾಜ ಕಲ್ಯಾಣ ಇಲಾಖೆಯು ಸಕಾಲದಲ್ಲಿ ಬಾಡಿಗೆ ಪಾವತಿಸದೆ ವಿಳಂಬ ಧೋರಣೆ ಅನುಸ-ರಿಸಿದ ಕಾರಣ 2025 ಡಿಸೆಂಬರ್ 24 ರಂದು ಕೋರ್ಟ್ ನಲ್ಲಿ (ಒ.ಎಸ್.ನಂ.228|2020) ದಾವೆ ಹೂಡಿದ್ದರು. ಕೋರ್ಟ್ 10,90,665, ರೂ.ಬಾಡಿಗೆ ಹಾಗೂ ಬಡ್ಡಿ 8,17,980, ರೂ. ಹಾಗೂ ಇತರೆ ಸೇರಿ ಒಟ್ಟು 20,03,772 ರೂ. ಕಟ್ಟಡ ಮಾಲೀಕರಿಗೆ ಪಾವತಿಸಲು ಸಮಾಜ ಕಲ್ಯಾಣ ಇಲಾಖೆಗೆ ಆದೇಶ ಮಾಡಿತ್ತು.

ಇಲಾಖೆಯ ಅಧಿಕಾರಿಗಳು ಕೋರ್ಟ್ ಆದೇಶದಂತೆ ನಿಗದಿತ ಅವಧಿಯಲ್ಲಿ ಹಣವನ್ನು ಪಾವತಿಸಿರಲಿಲ್ಲ. ಈ ಹಿನ್ನೆಲೆಯಲ್ಲಿ ದಾವೆದಾರರ ಮನವಿಯನ್ನು ಮಾನ್ಯ ಮಾಡಿದ ಕೋರ್ಟ್ ಇಲಾಖೆ ಕಚೇರಿಯ ಸಾಮಗ್ರಿಗಳ ಜಪ್ತಿಗೆ ಆದೇಶ ಹೊರಡಿಸಿದೆ. ದಾವೆದಾರರಾದ ಖಾಜಾಸಾಬ್ ಅವರ ಪರ ವಕೀಲ ಎನ್.ರಾಮನಗೌಡ ವಾದಿಸಿದರು. ಈ ವೇಳೆ ಜಪ್ತಿಯಲ್ಲಿ ನ್ಯಾಯಾಲಯದ ಅಮೀನ್ ಬೂದಿ ಬಸವ, ಬಸವರಾಜ, ಮಹಾಂತೇಶ, ಸುಮಂಗಲಾ, ವಕೀಲ ಹುಸೇನ್ ಭಾಷಾ ಇದ್ದರು.

## ಮಸ್ಕಿ ವಿವಿಧ ವಾರ್ಡಗಳಿಗೆ ಶಾಸಕ ಆರ್. ಬಸನಗೌಡ ತುರ್ವಿಹಾಳ ಭೇಟಿ

❏ ನೈಜ್ಯ ದೇಸೆ ನ್ಯೂಸ್

**ಮಸ್ಕಿ: ಪಟ್ಟಣದ 17,18ನೇ ವಾರ್ಡ್ ಸೇ-ರಿದಂತೆ ವಿವಿಧ ವಾರ್ಡ್ ಗಳಿಗೆ ಖಾದಿ ಗ್ರಾಮೋದ್ಯೋಗ ನಿಗಮದ ಅಧ್ಯಕ್ಷ ಶಾಸಕ ಆರ್ ಬಸನಗೌಡ ತುರುವಿಹಾಳ ಅವರು ಸೋಮವಾರ ಭೇಟಿ ನೀಡಿ ವಾರ್ಡುಗಳಲ್ಲಿ ಸಾರ್ವಜನಿಕರಿಂದ ಸಮಸ್ಯೆಗಳನ್ನು ಆಲಿಸಿ ಪರಿಶೀಲನೆ ನಡೆಸಿದರು.**

ಪಟ್ಟಣದ 17 ಹಾಗೂ 18 ನೇ ವಾರ್ಡಿನಲ್ಲಿ ಬೇಟಿ ನೀಡಿದ ಸಂದರ್ಭದಲ್ಲಿ ಅಲ್ಲಿನ ಸಾರ್ವಜನಿಕರು ಇಲ್ಲಿನ ಬಡಾವಣೆಯಲ್ಲಿ ಮಳೆ ಬಂದರೆ ಚರಂಡಿಯಿಂದ ನೀರು ಹೊರಗಡೆ ಬಂದು ರಸ್ತೆ ಮೇಲೆಯೇ ನಿಲ್ಲುತ್ತದೆ ಇದರಿಂದ ಓಡಾಡಲು ತೊಂದರೆಯಾಗುತ್ತದೆ ಆದ-ರಿಂದ ಸೂಕ್ತ ಚರಂಡಿ ವ್ಯವಸ್ಥೆ ಹಾಗೂ ಸಿಸಿ ರಸ್ತೆಯನ್ನು ಮಾಡುವಂತೆ ಶಾಸಕರಿಗೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಆರ್ ಬಸನಗೌಡ



ತುರುವಿಹಾಳ ಅವರು ಪಟ್ಟಣದ ಯಾವ ಯಾವ ವಾರ್ಡುಗಳಲ್ಲಿ ಏನೆಲ್ಲಾ ಸಮಸ್ಯೆ ಇದೆಯೋ ಎನ್ನುವುದನ್ನು ಪಟ್ಟಿ ಸಿದ್ಧಪಡಿಸಿ ಮುಂಬರುವ ದಿನಗಳಲ್ಲಿ ಸಿಸಿ ರಸ್ತೆ ಹಾಗೂ ಚರಂಡಿ ನಿರ್ಮಿಸಲು ಬೇಕಾದ ಅನುದಾನ ಒದಗಿಸಿ ಇಲ್ಲಿನ ಜನ-ರಿಗೆ ತೊಂದರೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಪುರಸಭೆ ಮುಖ್ಯಾಧಿಕಾರಿ ನರಸ ರೆಡ್ಡಿ ಅವರಿಗೆ ಸೂಚನೆ ನೀಡಿದರು.

ಅಲ್ಲದೆ ಪಟ್ಟಣದ ಎಲ್ಲಾ ವಾರ್ಡ್ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಯಾಗದಂತೆ ವಿದ್ಯುತ್ ದೀಪ ಹಾಗೂ ಸೂಕ್ತ ಚರಂಡಿ ವ್ಯವಸ್ಥೆ ಸೇರಿದಂತೆ ಸ್ವಚ್ಛತೆಗೆ ಪ್ರಮುಖ ಆದ್ಯತೆ ನೀಡಿ ಎಂದು ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಪುರಸಭೆ ಮುಖ್ಯ ಅಧಿಕಾರಿ ನರಸರೆಡ್ಡಿ, ಮಸ್ಕಿ ತಾಲೂಕು ಗ್ಯಾರಂಟಿ ಸಮಿತಿಯ ಅಧ್ಯಕ್ಷ ಮಹಿಬೂಬ್ ಸಾಬ್ ಮುದ್ದಾಪುರ್, ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ನಾಗಭೂಷಣ, ಪುರಸಭೆ ಸದಸ್ಯರಾದ ಕೃಷ್ಣ ಚಿಗರಿ, ಶಿವು ಬ್ಯಾಳಿ, ಸಾರಪ್ಪ ಬಂಗಾಲಿ, ಮಲ್ಲಯ್ಯ ಮುರಾರಿ, ನಿಸಾರ್ ಅಹ್ಮದ್, ಶಿವರೆಡ್ಡಿ, ಮಲ್ಲಯ್ಯ ಮಲ್ಕಪುರ, ರಮೇಶ್ ಕಾಸ್ಲಿ, ಸೇರಿದಂತೆ ಇನ್ನಿತರ ಮುಖಂಡರು ಹಾಗೂ ಕಾರ್ಯಕರ್ತರು ಇದ್ದರು.

## ಬಸ್ ನಿಲ್ದಾಣ ಅಭಿವೃದ್ದಿಗೆ 4 ಕೋಟಿ 90 ಲಕ್ಷ ರೂ ಮಂಜೂರು ಶಾಸಕ ನಾಡಗೌಡ

❏ ನೈಜ್ಯ ದೇಸೆ ನ್ಯೂಸ್

**ಮುದ್ದೇಬಿಹಾಳ: ಪಟ್ಟಣದ ಕೇಂದ್ರ ಬಸ್ ನಿಲ್ದಾಣದ ಆವರಣವನ್ನು ಕಾಂಕ್ರೀಟ್ ಮಾಡುವ ಕಾಮಗಾರಿಗೆ ರಾಜ್ಯ ಸರ್ಕಾರದಿಂದ ಸುಮಾರು 4 ಕೋಟಿ 90 ಲಕ್ಷ ರೂ. ಅನುದಾನ ಮಂಜೂರಾಗಿದೆ ಎಂದು ಸಾಬೂನು ಹಾಗೂ ಮಾರ್ಜಕ ನಿಗಮದ ನಿ. ಅಧ್ಯಕ್ಷರೂ ಆಗಿರುವ ಶಾಸಕ ಸಿ.ಎಸ್. ನಾಡಗೌಡ ಅಪ್ಪಾಜಿ ಹೇಳಿದರು.**

ಶನಿವಾರ ಪಟ್ಟಣದ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ಅಲ್ಲಿನ ಸಮಸ್ಯೆಗಳನ್ನು ಆಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಸ್ ನಿಲ್ದಾಣವು ಸಾವಿರಾರು ಪ್ರಯಾಣಿಕರ ನಿತ್ಯ ಸಂಚಾರದ ಪ್ರಮುಖ ಕೇಂದ್ರವಾಗಿದ್ದು, ಮಳೆಗಾಲ ಹಾಗೂ ಬೇಸಿಗೆಯಲ್ಲಿ ಸಾರ್ವಜನಿಕರು ಎದುರಿಸುವ ತೊಂದರೆಗಳನ್ನು ಮನಗಂಡು ಕಾಂಕ್ರೀಟ್ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ



ಎಂದರು. ಕಾಮಗಾರಿ ಪೂರ್ಣಗೊಂಡ ಬಳಿಕ ಪ್ರಯಾಣಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಹೇಳಿದರು.

ಇದೇ ವೇಳೆ ಹಡಲಗೇರಿ ರಸ್ತೆಯಲ್ಲಿ ಡಿಪೊ ನಿರ್ಮಾಣಕ್ಕಾಗಿ ಸುಮಾರು 3 ಎಕರೆ ಸ್ಥಳವನ್ನು ಪರಿಶೀಲಿಸಲಾಗಿದ್ದು, ಈ ಕುರಿತು ಇನ್ನೂ ಅಂತಿಮ ಹಂತದ ನಿರ್ಧಾರ ಕೈಗೊಳ್ಳಬೇಕಿದೆ. ಅಧಿಕಾ-ರಿಗಳೊಂದಿಗೆ ಚರ್ಚಿಸಿ ಶೀಘ್ರದಲ್ಲೇ ಸೂಕ್ತ ನಿರ್ಣಯ ತೆಗೆದುಕೊಳ್ಳಲಾಗುವುದು ಎಂದು ಅವರು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಡಿಪೂ ಮ್ಯಾನೇಜರ್ ಅಶೋಕಕುಮಾರ ಬೋವಿ, ಗೋಪಾಲ ಮಡಿವಾಳರ, ಜೆ.ಡಿ. ಮುಲ್ಲಾ ಸೇರಿದಂತೆ ಸಾರಿಗೆ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ವಿದ್ಯಾ ಪಬ್ಲಿಕ್ ಸ್ಕೂಲ್, ವಿದ್ಯಾರ್ಥಿಗಳು ಕಾರುಣ್ಯಾಶ್ರಮಕ್ಕೆ ಭೇಟಿ ಚಳಿಗಾಲದ ಉಡುಪುಗಳ ವಿತರಣೆ

❏ ನೈಜ್ಯ ದೇಸೆ ನ್ಯೂಸ್

**ಸಿಂಧನೂರು: ಜ 12 ನಗರದ ಮಸ್ಕಿ ರಸ್ತೆಯಲ್ಲಿರುವ ವಿದ್ಯಾ ಪಬ್ಲಿಕ್ ಸ್ಕೂಲ್ ನ ಎಲ್ಲಾ ತರಗತಿಯ ವಿದ್ಯಾರ್ಥಿಗಳನ್ನು ಶಾಲೆಯ ಸಂಸ್ಥಾಪಕರಾದ ಗೋಪಾಲಕೃಷ್ಣ ಹಾಗೂ ಕಾರ್ಯದರ್ಶಿಗಳಾದ ವೈ. ನರೇಂದ್ರನಾಥ ಇವರುಗಳ ಸೂಚನೆಯ ಮೇರೆಗೆ ಕಾರುಣ್ಯ ಆಶ್ರಮದಲ್ಲಿ ವಿಶೇಷವಾಗಿ ಸಂಸ್ಕಾರ ಸಂಸ್ಕೃತಿಯ ಉಪನ್ಯಾಸ ನೆರವೇ-ರಿತು.ಈ ಸಂದರ್ಭದಲ್ಲಿ ಆಶ್ರಯದಾತರುಗಳಿಗೆ ಚಳಿಗಾಲದ ಉತ್ತಮ ಉಡುಪುಗಳನ್ನು ವಿದ್ಯಾ ಪಬ್ಲಿಕ್ ಸ್ಕೂಲ್ ನಿಂದ ವಿತರಿಸಲಾಯಿತು.**

ಈ ಕಾರ್ಯಕ್ರಮದಲ್ಲಿ ಎಲ್ಲಾ ವಿದ್ಯಾರ್ಥಿಗಳು ಆಶ್ರಮದ ಎಲ್ಲಾ ಕೋಣೆಗಳನ್ನು ವೀಕ್ಷಿಸಿ ಆಶ್ರಯದಾತರುಗಳಿಗೆ ಆತ್ಮಸ್ಥೈರ್ಯ ತುಂಬಿದರು. ನಂತರ ವಿದ್ಯಾ ಪಬ್ಲಿಕ್ ಸ್ಕೂಲ್ ನ ಮುಖ್ಯೋಪಾಧ್ಯಾಯರಾದ ಶ್ರೀ ಲಕ್ಷ್ಮಿ ಅವರನ್ನು ಆಶ್ರಮದ ವತಿಯಿಂದ ಸನ್ಮಾನಿಸಿ ಗೌರವಿಸಿ ನೆನಪಿನ ಕಾಣಿಕೆ ವಿತರಿಸಲಾಯಿತು. ಈ





ಕಾರ್ಯಕ್ರಮದಲ್ಲಿ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸಯ್ಯಸ್ವಾಮಿ ಹಿರೇಮಠವರು ಸಂಸ್ಕೃತಿ ಸಂಸ್ಕಾರದ ಬಗ್ಗೆ ಎಲ್ಲಾ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಮೂಲಕ ವಿದ್ಯಾರ್ಥಿಗಳ ಪ್ರೀತಿಗೆ ಪಾತ್ರರಾದರು. ಈ ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರಾದ ಶ್ರೀ ಲಕ್ಷ್ಮಿ ಮಾತನಾಡಿ ನಮ್ಮ ಶಾಲೆಯ ಒಂದರಿಂದ 10ನೆಯ ತರಗತಿಯ ವಿದ್ಯಾರ್ಥಿಗಳು ಈ ಕಾರುಣ್ಯ ಆಶ್ರಮದ ಸೇವೆಯನ್ನು ನೋಡುವುದಲ್ಲದೆ ಸಂಸ್ಕೃತಿ ಉಪನ್ಯಾಸವನ್ನು ಪ್ರತಿಯೊಬ್ಬರೂ ಮೈಗೂಡಿಸಿಕೊಳ್ಳಲಿದ್ದಾರೆ.

ವಿದ್ಯಾರ್ಥಿಗಳು ಭಾವುಕರಾದ ರೀತಿ ಮತ್ತು ಸಮಾಜದಲ್ಲಿ ಶಿಕ್ಷಣಕ್ಕಿರುವ ಮಹತ್ವದ ಹಲವಾರು ಅಂಶಗಳನ್ನು ತಿಳಿದುಕೊಂಡು ಆಶ್ರಮದ ವಾಸ್ತವ ಸ್ಥಿತಿಯನ್ನು ನೋಡಿದಾಗ. ವಿದ್ಯಾರ್ಥಿಗಳಿಗಲ್ಲದೆ ಶಿಕ್ಷಕರುಗಳು ಕೂಡ ಬಾವುಕರಾಗಿರುವುದು. ಇಂದಿನ ಕಾರ್ಯಕ್ರಮಕ್ಕೆ ಅರ್ಥ ಸಿಕ್ಕಂತಾಗಿದೆ. ಈ ನಮ್ಮ ಕಾರುಣ್ಯ ಆಶ್ರಮವು ಸಮಾಜಕ್ಕೆ ಸಂಸ್ಕೃತಿ ಸಂಸ್ಕಾರದ ಪಾಠವನ್ನು ಮಾಡುತ್ತಾ ಸಮಾಜ ಏಳಿಗೆಗೆ ಉತ್ತಮ ಸೇವೆ ಒದಗಿಸುತ್ತಿದೆ. ಪ್ರತಿಯೊಬ್ಬ ತಂದೆ ತಾಯಿಗಳು ಮಕ್ಕಳ ಬಗ್ಗೆ ಅದೆಷ್ಟೋ ಕನಸುಗಳನ್ನಿಟ್ಟುಕೊಂಡು ಕಷ್ಟದ ಮಧ್ಯೆ ಮಕ್ಕಳಿಗೆ ಶಿಕ್ಷಣವನ್ನು ಕೊಡಿಸುತ್ತಾರೆ. ಆದರೆ ಕೊನೆಯ ದಿನಗಳಲ್ಲಿ ಇಂತಹ ವೃದ್ಧಾಶ್ರಮಕ್ಕೆ ಸೇರಿರುವ ಅದೆಷ್ಟೋ ಉದಾಹರಣೆಗಳನ್ನು ಕೂಡ ನಾವು ನೀವೆಲ್ಲರೂ ನೋಡಿದ್ದೇವೆ.

ಶಿಕ್ಷಣದ ಮಹತ್ವವನ್ನು ತಿಳಿಸಿರುವ ಕಾರುಣ್ಯ ಆಶ್ರಮದ ಪ್ರತಿಯೊಬ್ಬ ಸಿಬ್ಬಂದಿಗಳಿಗೂ ಕೂಡ ನಮ್ಮ ಶಾಲೆಯ ವತಿಯಿಂದ ಧನ್ಯವಾದಗಳು. ಜೀವನದ ಸಂಸ್ಕಾರ ಸಂಸ್ಕತಿಯ ಪಾಠಶಾಲೆಯಾಗಿರುವ ಕಾರುಣ್ಯ ಆಶ್ರಮವು ನೊಂದವರ ನೆಲೆ ಇಲ್ಲದ ತಮಗರಿವಿಲ್ಲದ ಅದೆಷ್ಟೋ ಜೀವಿಗಳಿಗೆ ನೆಲೆಯಾಗಿರುವುದು ನಮ್ಮೆಲ್ಲಾ ವಿದ್ಯಾರ್ಥಿಗಳಿಗೆ ಮತ್ತು ನಮ್ಮೆಲ್ಲಾ ಶಿಕ್ಷಣ ಬಳಗಕ್ಕೆ ತಮ್ಮ ಸೇವೆಯು ನಮ್ಮೆಲ್ಲರ ಪ್ರೀತಿಗೆ ಪಾತ್ರವಾಗಿದೆ ಎಂದು ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ವಿದ್ಯಾ ಪಬ್ಲಿಕ್ ಸ್ಕೂಲ್ ನ ರಾಜೀವ್.ಕೋ. ಆರ್ಡಿನೇಟರ್. ಶೇಕ್ಷಾವಲಿ ಸಹ ಶಿಕ್ಷಕರು. ಸಂತೋಷ ಸಹ ಶಿಕ್ಷಕರು. ದೀಪಿಕಾ ಸಹಶಿಕ್ಷಕರು. ಇಂದಿರಾ ಸಹಶಿಕ್ಷಕರು.

ಮಲ್ಲಿಕಾರ್ಜುನ ಸಹಶಿಕ್ಷಕರು. ಸ್ವಾತಿ ಸಹಶಿಕ್ಷಕರು. ಶಿವಾನಿ ಸಹಶಿಕ್ಷಕರು. ಮುತ್ತಣ್ಣ ಸಹಶಿಕ್ಷಕರು. ಸಿದ್ದಯ್ಯ ಸಹ ಶಿಕ್ಷಕರು. ಕು. ವೀಣಾ ಸಹ ಶಿಕ್ಷಕರು. ಹಾಗೂ ಶ್ರೀಮಠ ಸೇವಾ ಟ್ರಸ್ಟ್ ನ ಸದಸ್ಯರಾದ ಸುಜಾತ ಹಿರೇಮಠ. ಸಿಬ್ಬಂದಿಗಳಾದ ಸುಜಾತ ಮಲದ ಗುಡ್ಡ.ಸಿದ್ದಯ್ಯ ಸ್ವಾಮಿ. ಮ-ರಿಯಪ್ಪ.ಜ್ಯೋತಿ. ಹಾಗೂ ವಿದ್ಯಾ ಪಬ್ಲಿಕ್ ಸ್ಕೂಲ್ ನ ವಾಹನಗಳ ಚಾಲಕರು ಮತ್ತು ಎಲ್ಲಾ ತರಗತಿಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

ಜೀವಬಂಧುರ.!

ಮುಳುಗೇ ಹೋಯಿತು ಅನಿಸುವಷ್ಟರಲ್ಲಿ
ಪವಾಡ ಸದೃಶವಾಗಿ ನೌಕೆಯ ಮೇಲೆತ್ತಿ
ಭವಸಾಗರದಿ ತೇಲಿಸಿ ಕಾಪಿಡುವ ಶ್ರೀಕರ.!

ಬಾಡಿಯೇ ಹೋಯಿತು ಎನಿಸುವಷ್ಟರಲ್ಲಿ
ಯಾವುದೋ ಮಾಯೆಯಲಿ ಉಸಿರಿಟ್ಟು
ಜೀವಚೈತನ್ಯ ಚಿಗುರಿಸಿ ಪೊರೆವ ಶ್ರೀಧರ.!

ಬತ್ತಿಯೇ ಹೋಯಿತು ಅನಿಸುವಷ್ಟರಲ್ಲಿ
ಅನಿರೀಕ್ಷಿತ ಮಹಿಮೆಯಲಿ ಅಮೃತವಿಟ್ಟು
ಭಾವಜಲ ಉಕ್ಕಿಸಿ ಸಲಹುವ ಅಗೋಚರ.!

ಓ ನಿಂತೇ ಹೋಯಿತು ಎನಿಸುವಷ್ಟರಲ್ಲಿ
ನಿಗೂಢ ಜಾಡಿನಲಿ ಭಾವಿಯ ತಿರುವಿಟ್ಟು
ಬಾಳ ಚಲನಶೀಲವಾಗಿಸುವ ದಾಮೋದರ.!

ಆರಿಯೇ ಹೋಯಿತು ಅನಿಸುವಷ್ಟರಲ್ಲಿ
ಅನೂಹ್ಯ ಮೋಡಿಯಲಿ ಎಣ್ಣೆಬತ್ತಿಯಿಟ್ಟು
ಆತ್ಮಜ್ಯೋತಿ ಬೆಳಗಿ ಬೆಳಕಾಗಿಸುವ ನಗಧರ.!

ಹಾದಿಯೇ ಮುಗಿಯಿತು ಎನಿಸುವಷ್ಟರಲ್ಲಿ
ಊಹಾತೀತ ಲೀಲೆಯಲಿ ದಾರಿತಿರುವಿಟ್ಟು
ದಿಕ್ಕುದೆಸೆ ಬದಲಿಸಿ ದಾರಿತೋರುವ ಶಿಶಿರ.!

ಬಂಜರಾಯಿತು ಅಂದುಕೊಳ್ಳುವಷ್ಟರಲ್ಲಿ
ವಿಸ್ಮಯ ಗಾರುಡಿಯಲಿ ಹಚ್ಚಹಸಿರಿಟ್ಟು
ಒಡಲನೆಲ ಫಲವತ್ತಾಗಿಸುವ ನಂದಕಿಶೋರ!

ಸೋತಾಯಿತು ಎಂದುಕೊಳ್ಳುವಷ್ಟರಲ್ಲಿ
ಅಚ್ಚರಿಯಲಿ ಅದೃಶ್ಯನಾಗಿ ಆಸರೆಯಿಟ್ಟು
ಗೆಲುವಿನ ಪಥದಲಿ ಮುನ್ನಡೆಸುವ ಗಿರಿಧರ.!

ಭವಿಷ್ಯವಿನ್ನಿಲ್ಲವೆಂದು ಭಾವಿಸುವಷ್ಟರಲ್ಲಿ
ಬೆಳಕಾಗಿ ಬಂದು ಜಾತಕವಿಧಿಗಳ ಬದಿಗಿಟ್ಟು
ಬಾಳಭಾಷ್ಯ ಉಜ್ವಲವಾಗಿಸುವ ಚಕ್ರಧರ.!

ಬದುಕಿನ್ನಿಲ್ಲವೆಂದು ಬೋರಿಡುವಷ್ಟರಲ್ಲಿ
ಬೆಳದಿಂಗಳಾಗಿ ನಿಂದು ತಿಂಗಳ ಎದೆಗಿಟ್ಟು
ಕಂಗಳಕನಸ ಸಾಕಾರವಾಗಿಸುವ ಕರುಣಾಕರ.!

ಮುಗಿಲು ಕಡಲು ಒಡಲು ಎಲ್ಲೆಡೆಯಲ್ಲು
ಚಿತ್ತ ಚಿತ್ತಾರ ಚಮತ್ಕಾರಗಳ ಚೆಲುವಿಟ್ಟು
ಜಗದುಸಿರ ಝೇಂಕರಿಸುತಿಹ ಮುರಳೀಧರ.!

ಪ್ರತಿಕ್ಷಣ ಕ್ಷಣದಲ್ಲು ಪ್ರತಿಕಣ ಕಣದಲ್ಲು
ವ್ಯಕ್ತನಾಗಿ ಅವ್ಯಕ್ತನಾಗಿ ಕಾರುಣ್ಯ ನೆರವಿಟ್ಟು
ಚಿರಚಿರಂತನತೆ ಸಾಕ್ಷೀಕರಿಸಿಹ ಜೀವಬಂಧುರ.!

ಎ.ಎನ್.ರಮೇಶ್.ಗುಬ್ಬಿ.

# ಸಾಹಿತ್ಯದಲ್ಲಿ ಸರ್ವೋದಯದ ಆಶಯಗಳ ಚಿತ್ರಣ ಕವಿಗಳ ಜವಾಬ್ದಾರಿ: ಡಾ. ಶರೀಫ್ ಹಸಮಕಲ್

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಯಾವುದೇ ಸಾಹಿತ್ಯದಲ್ಲಿ ಸರ್ವೋದಯದ ಆಶಯಗಳು ಅಡಕವಾಗಿದ್ದರೆ ಅಂತಹ ಸಾಹಿತ್ಯ ಕಾಲಾತೀತವಾಗಿ ಗೆಲ್ಲುತ್ತದೆ ಎಂದು ಗಜಲ್ ಕವಿ ಡಾ. ಶರೀಫ್ ಹಸಮಕಲ್ ಹೇಳಿದರು. ಅವರು ಎಲ್.ಬಿ.ಕೆ & ನೊಬಲ್ ಪದವಿ ಮಹಾವಿದ್ಯಾಲಯದಲ್ಲಿ ಆಯೋಜಿಸಲಾದ ಸಾಹಿತಿ ಡಾ. ಮಲ್ಲಿಕಾರ್ಜುನ ಕಮತಗಿ ಅವರ "ಜವಾರಿ ಜರ್ನಿ" ಕೃತಿಯ ಕುರಿತು ಮಾತನಾಡಿದರು.**

ಪಂಪನಿಂದ ಆರಂಭಗೊಂಡ ಕನ್ನಡ ಸಾಹಿತ್ಯ ಪರಂಪರೆಯಲ್ಲಿ ಸರ್ವೋದಯದ ಕನಸು ಅನೇಕ ಕವಿಗಳ ಬರಹಗಳಲ್ಲಿ ವ್ಯಕ್ತವಾಗಿದೆ. ಇದೇ ಸಾಲಿನಲ್ಲಿ ಕಮತಗಿಯವರ ಜವಾರಿ ಜರ್ನಿ ಕೃತಿ ಸೇರಿದೆ. ಪ್ರಸ್ತುತ ಸಮಾಜದಲ್ಲಿ ಧರ್ಮ, ಜಾತಿ, ವರ್ಗ, ಆಹಾರ ಸಂಸ್ಕೃತಿಯ ಹೆಸರಿನಲ್ಲಿ ಕೋಮು ಸಂಘರ್ಷಗಳನ್ನು ಬಿತ್ತುವ ಪ್ರಯತ್ನಗಳು ಹೆಚ್ಚುತ್ತಿರುವ ಸಂದರ್ಭದಲ್ಲಿ, "ಪಾಕಿಸ್ತಾನದ ಕಾಗೆ ಭಾರತಕ್ಕೆ ಬಂತು" ಎಂಬ ಅನುಭವ ಕಥನದ ಮೂಲಕ ಗಡಿಗಳನ್ನು ಮೀರಿ ಮಾನವೀಯತೆಯ ಅಗತ್ಯತೆಯನ್ನು ಕವಿ ಅಭಿವ್ಯಕ್ತಿಸಿದ್ದಾರೆ ಎಂದರು. ಕೃತಿಯ ಅಡಿಬರಹ "ಒಂದಿಷ್ಟು ನಗೆ ? ಒಂದಿಷ್ಟು ನಗ್ನ" ಎಂಬುದು ಕೇವಲ ದೇಹದ



ನಗ್ನತೆಯಲ್ಲ, ಮನಸ್ಸಿನ ಮೋಹವನ್ನು ಬಿಚ್ಚಿಡುವ ಸಂಕೇತವಾಗಿದೆ. ತಾಯಿ?ಮಗುವಿನ ಸಂಬಂಧ, ಜಾತಿ ಕಾರಣಕ್ಕೆ ತಿರಸ್ಕೃತಳಾದ ಹುಡುಗಿಯ ಕಥನದ ಮೂಲಕ ಬಸವಣ್ಣನ ತತ್ವಗಳಿಗೆ ವಿರುದ್ಧವಾಗಿ ನಡೆದುಕೊಳ್ಳುವ ಸಮಾಜದ ವೈರುಧ್ಯಗಳನ್ನು ಕವಿ ಮಾನವೀಯ ನೆಲೆಯಲ್ಲಿ ಚಿತ್ರಿಸಿದ್ದಾರೆ. 21 ಅನುಭವ ಕಥನಗಳಲ್ಲಿ ಬದುಕಿನ ನೋವು, ನಲಿವು, ಹಾಸ್ಯ ಮತ್ತು ಕಾರುಣ್ಯ ಒಂದೇ ಹೊಳಪಿನಲ್ಲಿ ಮೂಡಿಬಂದಿದೆ ಎಂದು ಅವರು ಪ್ರಶಂಸಿಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯ ಪ್ರೊ. ಸಿ.ಬಿ. ಚಿಲ್ಕರಾಗಿ, ಜವಾರಿ ಜರ್ನಿಗೆ ಬೆನ್ನುಡಿ ಬರೆದ ಅನುಭವ ಹರ್ಷ ತಂದಿದೆ ಎಂದರು. ಓದುವ ಜರ್ನಿ ಮತ್ತು ತಿಳಿಯುವ ಜರ್ನಿ ಎರಡೂ ಕೃತಿಯಲ್ಲಿ ಸಮಥರ್ವಾಗಿ ಮೂಡಿಬಂದಿವೆ ಎಂದು ಹೇಳಿದರು. ಕೃತಿಯನ್ನು ಲೋಕಾರ್ಪಣೆ ಮಾಡಿದ ಡಾ. ಸಿದ್ದಯ್ಯ ಪುರಾಣಿ ಟ್ರಸ್ಟ್ ಅಧ್ಯಕ್ಷ ಅಜ್ಮೀರ್ ನಂದಾಪುರ ಮಾತನಾಡಿ, ಕಮತಗಿಯವರು ಪ್ರಾಮಾಣಿಕ ಮನಸ್ಸಿನಿಂದ ಬದುಕಿನ ಅನುಭವಗಳನ್ನು ಕಟ್ಟಿಕೊಟ್ಟಿದ್ದಾರೆ. ಈ ಕೃತಿ ವಿದ್ಯಾರ್ಥಿಗಳಿಗೆ ಪಠ್ಯವಾಗಿದರೆ ಮಾನವೀಯ ಮೌಲ್ಯಗಳನ್ನು ಬೆಳೆಸಲು ಸಹಕಾರಿಯಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೋಲಕಾರ ಫ್ಯಾಮಿಲಿ ಟ್ರಸ್ಟ್ ಪ್ರಕಾಶನದ ರಾಘವೇಂದ್ರ ಕೋಲಕಾರ ವಹಿಸಿ ಮಾತನಾಡಿ, ಓದುಗರು ಸ್ಥಳೀಯ ಸಾಹಿತಿಗಳ ಕೃತಿಗಳನ್ನು ಕೊಂಡು ಓದಿ ಪ್ರೋತ್ಸಾಹಿಸಬೇಕು ಎಂದು ಕರೆ ನೀಡಿದರು. ಈ ಸಂದರ್ಭದಲ್ಲಿ ದಲಿತ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಅಮರಾಪುರ, ಲೇಖಕರ ತಂದೆ ಹೊಳೆಯಪ್ಪ ಕಮತಗಿ, ಸುರಪುರ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಶರಣಬಸಪ್ಪ ಯಾಳವಾರ ಸೇರಿದಂತೆ ಹಲವಾರು ಸಾಹಿತಿಗಳು, ಪತ್ರಕರ್ತರು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಬಿ.ಎ ಅಂತಿಮ ವರ್ಷದ ವಿದ್ಯಾರ್ಥಿನಿ ಅಕ್ಕಮಹಾದೇವಿ ಪ್ರಾರ್ಥಿಸಿದರು. ರಾಮಣ್ಣ ಹಿರೇಬೇರ್ಗಿ ಸ್ವಾಗತಿಸಿದರು. ಬಸವರಾಜ ಚಿಗರಿ ವಂದಿಸಿದರು. ಈಶ್ವರ ಹಾಲಿಗಿ ಕಾರ್ಯಕ್ರಮ ನಿರೂಪಿಸಿದರು.

# ಸಹನಾ ಶಾಲೆಯಲ್ಲಿ ಸ್ವಾಮಿ ವಿವೇಕಾನಂದ ಜಯಂತಿ ಹಾಗೂ ರಾಷ್ಟ್ರೀಯ ಯುವ ದಿನಾಚರಣೆ



ನೈಜ್ಯ ದೆಸೆ ನ್ಯೂಸ್

**ಮುದಗಲ್: ಪಟ್ಟಣದ ಕಿಲ್ಲದಲ್ಲಿರುವ ಸಹನಾ ಶಾಲೆಯಲ್ಲಿ ಇಂದು ಭಾರತದ ಮಹಾನ್ ಚೇತನ, ಯುವಕರ ಸ್ಫೂರ್ತಿಯ ಸೆಲೆ ಸ್ವಾಮಿ ವಿವೇಕಾನಂದರ ಜಯಂತಿಯನ್ನು 'ರಾಷ್ಟ್ರೀಯ ಯುವ ದಿನ'ವಾಗಿ ಅತ್ಯಂತ ಸಡಗರ ಹಾಗೂ ಭಕ್ತಿಭಾವದಿಂದ ಆಚರಿಸಲಾಯಿತು. ಕಾರ್ಯಕ್ರಮವು ಸ್ವಾಮಿ ವಿವೇಕಾನಂದರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಆರಂಭಗೊಂಡಿತು.**

ನಂತರ ಶಾಲೆಯ ಮುಖ್ಯೋಪಾಧ್ಯಾಯರು ಹಾಗೂ ಆಹ್ವಾನಿತ ಅತಿಥಿಗಳು ದೀಪ ಬೆಳಗಿಸಿ ಗೌರವ ಸಲ್ಲಿಸಿದರು. ವಿದ್ಯಾರ್ಥಿನಿಯರು ಸ್ವಾಮಿ ವಿವೇಕಾನಂದರ ತತ್ವಗಳನ್ನು ಪ್ರತಿಪಾದಿಸುವ ದೇಶಭಕ್ತಿ ಗೀತೆಗಳನ್ನು ಸುಶ್ರಾವ್ಯವಾಗಿ ಹಾಡಿ ಸಭಿಕರ ಮನಸೂರೆಗೊಂಡರು. ಮುಖ್ಯೋಪಾಧ್ಯಾಯರಾದ ಆದಪ್ಪ ಅವರು ಮಾತನಾಡಿ, ಯುವಶಕ್ತಿ ದೇಶದ ಅಮೂಲ್ಯ ಆಸ್ತಿ. ಸ್ವಾಮಿ ವಿವೇಕಾನಂದರ ವಿಚಾರಧಾರೆಗಳು ಇಂದಿನ ಯುವ ಪೀಳಿಗೆಗೆ ದಾರಿದೀಪವಾಗಿವೆ ಎಂದು ಹೇಳಿದರು. ಶಿಸ್ತು, ಆತ್ಮವಿಶ್ವಾಸ ಹಾಗೂ ಸೇವಾಭಾವದಿಂದ ಬದುಕನ್ನು ರೂಪಿಸಿಕೊಳ್ಳಬೇಕು ಎಂದು ಅವರು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕಿಂಯಾದ ಕವಿತಾ ಮಾತನಾಡಿ, "ವಿದ್ಯಾರ್ಥಿಗಳು ಕೇವಲ ಅಂಕಗಳಿಕೆಯ ಹಿಂದೆ ಬೀಳದೆ, ಸ್ವಾಮಿ ವಿವೇಕಾನಂದರು ಹೇಳಿದಂತೆ ನೈತಿಕತೆ, ಶ್ರದ್ಧೆ ಹಾಗೂ ಸದೃಢ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಬೇಕು" ಎಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕಿಯರಾದ ಕವಿತಾ, ಹೀನಾ ಬೇಗಂ ಹಾಗೂ ನಿಲುಬಾಯಿ ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಶಾಲೆಯ ಶಿಕ್ಷಕಿಯಾದ ಅಸ್ಮಾ ಬೇಗಂ ಅವರು ಸಮರ್ಥವಾಗಿ ನಿರೂಪಿಸಿದರು.

# ನ.11 ರಂದು ಭಾರತ ರತ್ನ ಮೌಲಾನಾ ಅಬುಲ್ ಕಲಾಂ ಆಜಾದ್ ರವರ ಜಯಂತಿಯನ್ನು ಆಚರಿಸುವುದಕ್ಕೆ ಕ್ರಮ ಕೈಗೊಳ್ಳಬೇಕು: ಸೈಯಾದ್ ಹುಸೇನ್ ಸಾಹೇಬ್

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಪತ್ರಿಕಾ ಭವನದಲ್ಲಿ ಮೌಲಾನಾ ಅಬುಲ್ ಕಲಾಂ ಆಜಾದ್ ಬ್ರೀಗೆಡ್ ಜಿಲ್ಲಾಧ್ಯಕ್ಷರಾದ ಸೈಯಾದ್ ಹುಸೇನ್ ಸಾಹೇಬ್ ಮಾತನಾಡಿ ಭಾರತ ರತ್ನ ಮೌಲಾನಾ ಅಬುಲ್ ಕಲಾಂ ಆಜಾದ್ ರವರು ನಮ್ಮ ದೇಶದ ಸ್ವಾಂತ್ರ?ಯಕ್ಕಾಗಿ ಹೋರಾಟ ಮಾಡಿದವರು ಹಾಗೂ ಸ್ವಾತಂತ್ರ?ಯ ನಂತರದಲ್ಲಿ ಕೇಂದ್ರದ ಮೊದಲ ಶಿಕ್ಷಣ ಸಚಿವರಾಗಿ ದೇಶದ ಶೈಕ್ಷಣಿಕ ಅಭಿವೃದ್ದಿಗೆ ಸಾಕಷ್ಟು ಶ್ರಮಿಸಿದ್ದಾರೆ.**

ಇವರ ಸಾಧನೆಯನ್ನು ಗುರುತಿಸಿದ ಯು.ಪಿ.ಐ.ಸರ್ಕಾರದ ಪ್ರಧಾನಿ ಮನಮೋಹನ್ ಸಿಂಗ್ ರವರು ನ.11 ರಂದು ಭಾರತ ರತ್ನ ಮೌಲಾನಾ




ಅಬುಲ್ ಕಲಾಂ ಆಜಾದ್ ರವರ ಜಯಂತಿಯನ್ನು ಆಚರಿಸುವುದಕ್ಕೆ ಅದೇಶ ನೀಡಿದರು ಕೂಡ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅವರ ಜಯಂತಿಯನ್ನು ಆಚರಿಸುವುದಕ್ಕೆ ಮುಂದಾಗುತ್ತಿಲ್ಲ ಅವರ ಶಿಕ್ಷಣ ಕ್ಷೇತ್ರದಲ್ಲಿನ ಸಾಧನೆಯನ್ನು ಗೌರವಿಸುವ ಉದ್ದೇಶದಿಂದ ಪ್ರಾರಂಭಿಸಲಾದ ಮೌಲಾನಾ ಅಬುಲ್ ಕಲಾಂ ಆಜಾದ್ ಅಂಗ್ಲಮಾಧ್ಯಮ ಅಲ್ಪಸಂಖ್ಯಾತರ ಶಾಲೆಗಳಲ್ಲಿ ಅಗತ್ಯ ಮೂಲ ಸೌಲಭ್ಯಗಳನ್ನು ಕಲ್ಪಿಸಬೇಕು, ಸಿರವಾರ ಪಟ್ಟಣ ಹಾಗೂ ಕವಿತಾಳ ಗ್ರಾಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮುಸ್ಲಿಂ ಸಮುದಾಯದವರು ಇರುವುದರಿಂದ ಅಲ್ಲಿನ ಮಕ್ಕಳ ವಿದ್ಯಾಭ್ಯಸಕ್ಕೆ ಅಗತ್ಯವಿರುವ ಉರ್ದು ಪ್ರೌಢಶಾಲೆಗಳನ್ನು ಅಭಿವೃದ್ದಿ ಪಡಿಸಬೇಕು.

ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿನ ಅಲ್ಪಸಂಖ್ಯೆತ ಸಮುದಾಯದವರ ಸಮಸ್ಯೆಗಳ ನಿವಾರಣೆಗಾಗಿ ಜಿಲ್ಲಾ ಮಟ್ಟದ ಬೃಹತ್ ಸಮಾವೇಶವನ್ನು ಮೌಲಾನಾ ಅಬುಲ್ ಕಲಾಂ ಆಜಾದ್ ಬ್ರೀಗೆಡ್ ವತಿಯಿಂದ ಹಮ್ಮಿಕೊಳ್ಳಲಾಗುವುದು.ಎಂದು ತಿಳಿಸಿದರು. ಗೌರವಾಧ್ಯಕ್ಷರಾದ ಇಸ್ಮಾಯಿಲ್ ಸಾಬ್ ತಾ.ಅಧ್ಯಕ್ಷರಾದ ಜಮೀಲ್ ಇಸ್ಮಾಯಿಲ್, ಉಪಾಧ್ಯಕ್ಷ ಸೈಯಾದ್ ಸಲೀಂ ಪಾಷಾ ಕಾರ್ಯದರ್ಶಿ ಅಜ್ಮೀರ್ ಪಾಷಾ, ನಗರ ಘಟಕದ ಅಧ್ಯಕ್ಷರಾದ ನಸಿರುದ್ದಿನ್ ಚೌದ್ರಿ ಇದ್ದರು.

# ಜೆಸ್ಕಾಂ ನಗರ-2: ಇಂದು ವಿದ್ಯುತ್ ವ್ಯತ್ಯಯ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 12 (ಕರ್ನಾಟಕ ವಾರ್ತೆ): ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ ವ್ಯಾಪ್ತಿಯ 110ಕೆವಿ 110/11ಏಗಿ, ಎಂಯುಎಸ್‌ಎಸ್, ಎಪಿಎಂಸಿ ಯಾರ್ಡ್ದ ಡ್ರಾಗ್‌ಹೌಸ್ ಲಿಂಕ್ ಲೈನ್ ವಿಭಜನೆ ಕಾಮಗಾರಿಯನ್ನು ಕೈಗೊಂಡ ಪ್ರಯುಕ್ತ ಜನವರಿ 13ರ ಬೆಳಿಗ್ಗೆ 10ರಿಂದ ಸಂಜೆ 5ಗಂಟೆಯ ಅಲ್ಲಮಪ್ರಭು ಕಾಲೋನಿ,**

ಪೋತಗಲ್ ರೋಡ, ಎಲ್.ಬಿ.ಎಸ್. ನಗರ, ಅಲಿ ಕಾಲೋನಿ, ಚಂದ್ರಬಂಡ ರಸ್ತೆ, ಆಶ್ರಯ ಕಾಲೋನಿ ಸೇರಿದಂತೆ ಸುತ್ತಮುತ್ತಲಿನ ಎಲ್ಲಾ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ 24*7ಗ್ರಾಹಕರ ನಿರಂತರ ಸೇವಾ ಕೇಂದ್ರ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿವಮೂರ್ತಿ ಎಂಬ ಯುವಕ ಕಾಣೆ: ಪತ್ತೆಗೆ ಗ್ರಾಮೀಣ ಪೊಲೀಸರ ಮನವಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 12 (ಕರ್ನಾಟಕ ವಾರ್ತೆ): ಜಿಲ್ಲೆಯ ದೇವದುರ್ಗ ತಾಲೂಕಿನ ಪಲಕನಮರಡಿ ಗ್ರಾಮದ ಶಿವಮೂರ್ತಿ ತಂದೆ ನಿಂಗಣ್ಣ (20) ಎಂಬ ಯುವಕ ರಾಯಚೂರಿನ ಯರಮರಸ್ ಕ್ಯಾಂಪನ ಬಿಸಿಎಮ್ ಇಲಾಖೆಯ ಡಿ.ದೇವರಾಜ ಅರಸು ಮೆಟ್ರಿಕ್ ನಂತರ ಬಾಲಕರ ವಸತಿದಲ್ಲಿದ್ದು, 2025ರ ಏಪ್ರೀಲ್ 13ರ ಬೆಳಿಗ್ಗೆ 09:30 ಗಂಟೆಯಿಂದ ಹಾಸ್ಟೇಲ್ ನಿಂದ ಹೊರಗಡೆ ತನ್ನ ಸ್ನೇಹಿತರ ಸಂಗಡ ಯರಮರಸ್ ಕ್ಯಾಂಪ ವರೆಗೆ ಹೋಗಿದ್ದು,**

ತಾನು ರಾಯಚೂರುಗೆ ಹೋಗಿ ಬರುತ್ತೇನೆ ಅಂತಹ ತನ್ನ ಸ್ನೇಹಿತರಿಗೆ ಹೇಳಿ ಹೋದವನು ಇಲ್ಲಿಯವರೆಗೆ ಹಾಸ್ಟೇಲ್‌ಗೆ ಬರದೇ ಕಾಣೆಯಾಗಿದ್ದು, ಈ ಕುರಿತು ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ:57/2025ರಡಿ



ಪ್ರಕರಣ ದಾಖಲಾಗಿದೆ. ಕಾಣೆಯಾದ ಯುವಕನ ಚಹರೆ: ವಯಸ್ಸು 20, ಜಾತಿ ಕುರುಬರು, ಉದ್ಯೋಗ ವಿದ್ಯಾರ್ಥಿ, ಗೋಧಿ ಬಣ್ಣ ಮೈ ಬಣ್ಣ, ದುಂಡನೇಯ ಮುಖ, ತಲೆಯಲ್ಲಿ ಕಪ್ಪು ಕೂದಲು, ಬಿಳಿ ಬಣ್ಣದ ಲೈನ್ ಫುಲ್ ಶರ್ಟ್, ಕಪ್ಪು ಬಣ್ಣದ ಫ್ಯಾಂಟ್, ಗುಲಾಬಿ ಬಣ್ಣದ ಟವೆಲ್ ಕೊರಳಲ್ಲಿ ಧರಿಸಿದ್ದು, ಕನ್ನಡ, ಇಂಗ್ಲೀಷ್ ಭಾಷೆ ಮಾತನಾಡುತ್ತಾನೆ.

ಈ ಯುವಕನ ಬಗ್ಗೆ ಸುಳಿವು ಕಂಡುಬಂದಲ್ಲಿ ಪಿ.ಎಸ್.ಐ. ರಾಯಚೂರು ಗ್ರಾಮೀಣ ಪೊಲೀಸ್ ಠಾಣೆ ಮೊಬೈಲ್ ಸಂಖ್ಯೆ: 9480803850, ಹಾಗೂ ಸಿ.ಪಿ.ಐ. ಗ್ರಾಮೀಣ ವೃತ್ತ ರಾಯಚೂರು ಮೊಬೈಲ್: 9480803832ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಗ್ರಾಮೀಣ ವೃತ್ತ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇತಿಹಾಸ ಬರೆದ ರಾಯಚೂರು ಮಹಾನಗರ ಪಾಲಿಕೆಯ ಸ್ವಚ್ಛತಾ ಓಟ

ನೈಜ್ಯ ದೆಸೆ ನ್ಯೂಸ್

**ರಾಯಚೂರು ಜನವರಿ 12 (ಕರ್ನಾಟಕ ವಾರ್ತೆ): ಸ್ವಚ್ಛ ಭಾರತ ಮಿಷನ್ ಹಾಗೂ ರಾಯಚೂರು ಉತ್ಸವ-2026ರ ಅಂಗವಾಗಿ ಜನವರಿ 12ರಂದು ರಾಯಚೂರು ಮಹಾನಗರ ಪಾಲಿಕೆ ಹಾಗೂ ಜಿಲ್ಲಾಡಳಿತದ ಸಂಯುಕ್ತ ಆಶ್ರಯದಲ್ಲಿ ಸ್ವಚ್ಛತಾ ಓಟ ಭವ್ಯವಾಗಿ ನಡೆಯಿತು. ಸಚಿವರು, ಸಂಸದರು, ಶಾಸಕರ ಮಾರ್ಗದರ್ಶದಡಿಯಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಹಾಗೂ ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೋಹಪಾತ್ರ ಅವರು ವಿಶೇಷವಾಗಿ ರೂಪಿಸಿದ ಈ ಸ್ವಚ್ಛತಾ ಓಟವು ಯುವಜನತೆಗೆ ಹೊಸ ಶಕ್ತಿ, ಪ್ರೇರಣೆ ಹಾಗೂ ಜಾಗೃತಿ ನೀಡಿತು.**

ರಾಯಚೂರು ಜನತೆಯಲ್ಲಿ ತಮ್ಮ ನಗರವನ್ನು ಸ್ವಚ್ಛ, ಸುಂದರ ಹಾಗೂ ಆರೋಗ್ಯಕರವಾಗಿಸುವ ಸಂಕಲ್ಪವನ್ನು ಮತ್ತಷ್ಟು ಬಲಪಡಿಸಿತು. ಕಾರ್ಯಕ್ರಮಕ್ಕೆ ಸಂಸದರಾದ ಜಿ. ಕುಮಾರ್ ನಾಯಕ್ ಅವರು ನೇತೃತ್ವ ವಹಿಸಿ ಸ್ವಚ್ಛತಾ ಓಟಕ್ಕೆ ಚಾಲನೆ ನೀಡಿದರು. ಈ ವೇಳೆ ಸಂಸದರು ಮಾತನಾಡಿ, ಸ್ವಾಮಿ ವಿವೇಕಾನಂದರ ಮೌಲ್ಯಗಳು, ಸದೃಢ ಶರೀರ ಮತ್ತು ಮನಸ್ಸಿನ ಮಹತ್ವ ಮತ್ತು ಸ್ವಚ್ಛ,



ಆರೋಗ್ಯಕರ ವಾತಾವರಣ ನೆನಪಿಸಿದರು. ಸ್ವಚ್ಛತಾ ಓಟದಲ್ಲಿ 3000ಕ್ಕೂ ಹೆಚ್ಚು ಜನರು ಭಾಗವಹಿಸಿದ್ದರು. ಶಾಲಾ ವಿದ್ಯಾರ್ಥಿಗಳಿಂದ- 65ರ ವಯೋಮಾನದವರು ಓಟದಲ್ಲಿ ಕಂಡು ಬಂದರು. ವಿದ್ಯಾರ್ಥಿಗಳು, ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳ ಅಧಿಕಾರಿಗಳು, ವಿವಿಧ ಸಂಘ?ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಉತ್ಸಾಹದಿಂದ ಪಾಲ್ಗೊಂಡರು. ರಾಯಚೂರು ಇತಿಹಾಸದಲ್ಲೇ ಮೊದಲ ಬಾರಿಗೆ ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಜನರು ಮ್ಯಾರಥಾನ್ ಓಟಕ್ಕೆ ಸ್ವಯಂಪ್ರೇರಿತವಾಗಿ ಭಾಗವಹಿಸಿದ್ದು ಮಹತ್ವದ ಸಾಧನೆಯಾಗಿ ರಾಯಚೂರು ಇತಿಹಾಸದಲ್ಲಿ ದಾಖಲಾಯಿತು. ಈ ಸ್ವಚ್ಛತಾ ಓಟವು ಸಾರ್ವಜನಿಕರಲ್ಲಿ ಸ್ವಚ್ಛತೆಯ ಅರಿವು, ಪರಿಸರ ಸಂರಕ್ಷಣೆ, ಆರೋಗ್ಯಕರ ಜೀವನ ಶೈಲಿ ಹಾಗೂ ಪಾಲಿಕೆಯೊಂದಿಗೆ ನಾಗರಿಕರ ಸಹಭಾಗಿತ್ವವನ್ನು ಮತ್ತಷ್ಟು ಬಲಪಡಿಸಿದೆ.

ಕಾರ್ಯಕ್ರಮಕ್ಕೆ ದೊರೆತ ವ್ಯಾಪಕ ಜನಬೆಂಬಲಕ್ಕೆ ಸಾರ್ವಜನಿಕರು ಸರ್ಕಾರ ಹಾಗೂ ಮಹಾನಗರ ಪಾಲಿಕೆಯ ಈ ಮಹತ್ವದ ಮುಂದಾಳತ್ವಕ್ಕೆ ಕೃತಜ್ಞತೆ ವ್ಯಕ್ತಪಡಿಸಿದರು. ಈ ಸ್ವಚ್ಛತಾ ಓಟದ ಮೂಲಕ ರಾಯಚೂರು ಜನತೆ ತಮ್ಮ ನಗರಕ್ಕಾಗಿ ಹೊಂದಿರುವ ಜವಾಬ್ದಾರಿ, ಒಗ್ಗಟ್ಟು ಮತ್ತು ಅಪಾರ ಶಕ್ತಿಯನ್ನು ಸ್ಪಷ್ಟವಾಗಿ ಪ್ರದರ್ಶಿಸಿದರು. ವಿಭಿನ್ನ ವಯೋಮಾನದವರು, ಹಿನ್ನೆಲೆಯವರು






ಹಾಗೂ ವೃತ್ತಿಯವರು ಒಂದೇ ಗುರಿಗಾಗಿ ಒಟ್ಟಾಗಿ ಭಾಗವಹಿಸಿರುವುದು, ರಾಯಚೂರು ಒಂದು ಜಾಗೃತ, ಹಾಗೂ ಚೈತನ್ಯಭರಿತ ನಗರ ಎಂಬುದನ್ನು ಸಾಬೀತುಪಡಿಸಿತು. ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ಮಾನವ ಸರಪಳಿಯನ್ನು "ರಾಯಚೂರು ಉತ್ಸವ?2026" ಎಂಬ ರೂಪದಲ್ಲಿ ವಿನ್ಯಾಸಗೊಳಿಸಲಾಗಿದ್ದು, ಅದನ್ನು ಡ್ರೋನ್ ಮೂಲಕ ಚಿತ್ರೀಕರಿಸಲಾಯಿತು. ಈ ದೃಶ್ಯವು ರಾಯಚೂರು ಉತ್ಸವಕ್ಕೆ ಮತ್ತಷ್ಟು ಉತ್ಸಾಹ ಮತ್ತು ಜೋಷ್ ನೀಡಿತು.

ಈ ಮೂಲಕ ರಾಯಚೂರು ನಗರವು ಒಗ್ಗಟ್ಟಿನ ಶಕ್ತಿ ಮತ್ತು ಸಕಾರಾತ್ಮಕ ಚಿಂತನೆಯೊಂದಿಗೆ ಮುಂದಿನ ಹೆಜ್ಜೆ ಇಡುತ್ತಿದೆ ಎಂಬ ಸಂದೇಶ ಸ್ಪಷ್ಟವಾಗಿ ಮೂಡಿಬಂದಿತು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೊಹಪಾತ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಕ್ಷು ಗಿರಿ, ಅಪರ ಜಿಲ್ಲಾಧಿಕಾರಿ ಶಿವಾನಂದ, ಮಹಾನಗರ ಪಾಲಿಕೆಯ ಸಮಿತಿ ಕಾರ್ಯದರ್ಶಿ ಹಾಗೂ ಸರಕಾರಿ ನೌಕರರ ಸಂಘದ ಅಧ್ಯಕ್ಷರಾದ ಕೃಷ್ಣ ಶಾಂವತಗೇರಿ, ಪಾಲಿಕೆಯ ಜೊನಲ್ 1ರ ಆಯುಕ್ತರಾದ ಪುಲಮ್ ಸಿಂಗ್, ಉಪ ಆಯುಕ್ತರಾದ ಸಂತೋಷ ರಾಣಿ, ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ರಾಯಚೂರು ತಹಸೀಲ್ದಾರ್ ಸುರೇಶ್ ವರ್ಮ, ಅರಕೇರಾ ತಹಶಿಲ್ದಾರ್ ಅಮರೇಶ ಬಿರಾದಾರ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರೇಶ ನಾಯಕ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಓಟದಲ್ಲಿ ಭಾಗಿಯಾದರು. ಮುಖಂಡರಾದ ರವಿ ಭೋಸರಾಜ್, ಜಯಣ್ಣ ಸೇರಿದಂತೆ ಜಿಲ್ಲೆಯ ಅನೇಕ ಗಣ್ಯಮಾನ್ಯರು ಭಾಗಿಯಾಗಿ ಸ್ವಚ್ಛತಾ ಓಟಕ್ಕೆ ಸ್ಫೂರ್ತಿ ನೀಡಿದರು.

## ನೇಮಕಾತಿ ಪ್ರಕಟಣೆ

KSCCF ನೇಮಕಾತಿ 2026–34 ಕ್ಲರ್ಕ್, ಸಹಾಯಕ, ಫಾರ್ಮಸಿಸ್ಟ್ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ KSCCF ನೇಮಕಾತಿ 2026: 34 ಕ್ಲರ್ಕ್, ಸೇಲ್ಸ್ ಅಸಿಸ್ಟೆಂಟ್, ಫಾರ್ಮಸಿಸ್ಟ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ರಾಜ್ಯ ಸಹಕಾರಿ ಗ್ರಾಹಕ ಒಕ್ಕೂಟ ಲಿಮಿಟೆಡ್ ಜನವರಿ 2026 ರ KSCCF ಅಧಿಕೃತ ಅಧಿಸೂಚನೆಯ ಮೂಲಕ ಕ್ಲರ್ಕ್, ಸೇಲ್ಸ್ ಅಸಿಸ್ಟೆಂಟ್, ಫಾರ್ಮಸಿಸ್ಟ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 07–ಫೆಬ್ರವರಿ–2026 ರಂದು ಅಥ–'ವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 09–01–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಮತ್ತು ಶುಲ್ಕ ಪಾವತಿಸಲು ಕೊನೆಯ ದಿನಾಂಕ: 07–ಫೆಬ್ರವರಿ–2026 ಅಧಿಕೃತ ವೆಬ್‌ಸೈಟ್: ksccsf.org/index.html

## ಸ್ವಾಮಿ ವಿವೇಕಾನಂದ ಕಾಲೇಜು ಲಿಂಗಸ್ಗೂರಿನಲ್ಲಿ ರಾಷ್ಟ್ರೀಯ ಯುವ ದಿನ, ಸ್ವಾಮಿ ವಿವೇಕಾನಂದ ಜಯಂತಿ ವಿಜೃಂಭಣೆಯಿಂದ ಆಚರಣೆ

❑ ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ನಗರದ ಸ್ವಾಮಿ ವಿವೇಕಾನಂದ ಆಯುರ್ವೇದಿಕ್ ಮೆಡಿಕಲ್ ಕಾಲೇಜ್, ಡಿ.ಫಾರ್ಮಸಿ ಕಾಲೇಜ್, ಬಿ.ಫಾರ್ಮಸಿ ಕಾಲೇಜ್, ಪ್ಯಾರಾಮೆಡಿಕಲ್ ಕಾಲೇಜ್, ನರ್ಸಿಂಗ್ ಕಾಲೇಜ್ ಹಾಗೂ ನ್ಯಾಚುರೋಪತಿ ಮೆಡಿಕಲ್ ಕಾಲೇಜ್, ಲಿಂಗಸಗೂರು ಇವರ ಸಂಯುಕ್ತ ಆಶ್ರಯದಲ್ಲಿ ರಾಷ್ಟ್ರೀಯ ಯುವ ದಿನದ ಅಂಗವಾಗಿ ಸ್ವಾಮಿ ವಿವೇಕಾನಂದರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.**

ಕಾರ್ಯಕ್ರಮದ ಆರಂಭದಲ್ಲಿ ಸ್ವಾಮಿ ವಿವೇಕಾನಂದರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ನಮನಗಳನ್ನು ಅರ್ಪಿಸಲಾಯಿತು. ನಂತರ ಮಾತನಾಡಿದ ಕಾಲೇಜಿನ ಅಧ್ಯಕ್ಷರಾದ ಶ್ರೀ ಶಾಂತನಗೌಡ ಪಾಟೀಲ್ ಅವರು, ಸ್ವಾಮಿ ವಿವೇಕಾನಂದರು ಯುವಜನತೆಗೆ ಆತ್ಮವಿಶ್ವಾಸ,



ಶಿಸ್ತು ಮತ್ತು ಸೇವಾ ಮನೋಭಾವವನ್ನು ನೀಡಿದ ಮಹಾನ್ ಚಿಂತಕರಾಗಿದ್ದು, ಅವರ ಜೀವನ ಸಂದೇಶಗಳು ಇಂದಿನ ಯುವಕ–ರಿಗೆ ದಾರಿದೀಪವಾಗಿವೆ ಎಂದು ಹೇಳಿದರು. ಕಾಲೇಜಿನ ಪ್ರಾಚಾರ್ಯರಾದ ಡಾ. ರಾಜಶೇಖರ್ ಹೆಚ್ ಮಾತನಾಡಿ, ಸ್ವಾಮಿ ವಿವೇಕಾನಂದರ ಶಿಕ್ಷಣ ತತ್ವಗಳು ವಿದ್ಯಾರ್ಥಿಗಳ ಸಮಗ್ರ ವ್ಯಕ್ತಿತ್ವ ವಿಕಾಸಕ್ಕೆ ಸಹಕಾರಿಯಾಗಿವೆ.

ಯುವಕರು ಕೇವಲ ವಿದ್ಯಾಭ್ಯಾಸಕ್ಕಷ್ಟೇ ಸೀಮಿತವಾಗದೇ ಮಾನವೀಯ ಮೌಲ್ಯಗಳು, ಸಾಮಾಜಿಕ ಹೊಣೆಗಾರಿಕೆ ಮತ್ತು ರಾಷ್ಟ್ರಸೇವೆಯತ್ತ ಮುಖ ಮಾಡಬೇಕು ಎಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಅಮರೇಶ್ ಹಿರೇಮಠ , ಅವರು ಸ್ವಾಮಿ ವಿವೇಕಾನಂದರ ಜೀವನ ಸಾಧನೆ, ಯುವಜನತೆಗೆ ನೀಡಿದ ಸಂದೇಶಗಳು ಹಾಗೂ ಭಾರತೀಯ ಸಂಸ್ಕೃತಿಯ ಮಹತ್ವದ ಕುರಿತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು. ವಿದ್ಯಾರ್ಥಿಗಳು ವಿವೇಕಾನಂದರ ವಚನಗಳನ್ನು ಪಠಿಸಿ, ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಪ್ರತಿಜ್ಞೆಯನ್ನು ಸ್ವೀಕರಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಗುಡುಸಾಬ, ಶ್ರೀ ಲಕ್ಷ್ಮೀ , ವಾಹಿದಾ, ವಿಜಯಕುಮಾರ್, ಮಹಾಂತೇಶ ,ಬಸವರಾಜ, ಎಲ್ಲಾ ಉಪನ್ಯಾಸಕರು ಹಾಗೂ ವಿವಿಧ ವಿಭಾಗಗಳ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ ಕಾರ್ಯಕ್ರಮಕ್ಕೆ ಕಳೆ ತಂದರು. ರಾಷ್ಟ್ರೀಯ ಯುವ ದಿನದ ಮಹತ್ವವನ್ನು ಸಾರುವ ಈ ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಶಿಸ್ತಿನ ಜೀವನ ಹಾಗೂ ಸಮಾಜಮುಖಿ ಚಿಂತನೆಗಳನ್ನು ಬೆಳೆಸುವಲ್ಲಿ ಪ್ರೇರಣೆಯಾಯಿತು.

## ಟ್ರ್ಯಾಕ್ಟರ್‌ನಲ್ಲಿ ತುಂಬಿ ಹೊತ್ತೊಯ್ಯುತ್ತಿದ್ದ ಕಬ್ಬಿಗೆ ಆಕಸ್ಮಿಕ ಬೆಂಕಿ

❑ ನೈಜ್ಯ ದೆಸೆ ನ್ಯೂಸ್

**ಮೂರು ಟ್ರ್ಯಾಲಿಗಳಲ್ಲಿ ತುಂಬಿ ಹೊತ್ತೊಯ್ಯುತ್ತಿದ್ದ ಕಬ್ಬಿಗೆ ಆಕಸ್ಮಿಕ ಬೆಂಕಿ ಹೊತ್ತಿಕೊಂಡಿರುವ ಘಟನೆ ಬಾಗಲಕೋಟೆ ಜಿಲ್ಲೆಯ ಸಾವಳಗಿ ಗ್ರಾಮದಲ್ಲಿ ನಡೆದಿದೆ. ಕಬ್ಬು ಒಣಗಿದ್ದರಿಂದ ಬೆಂಕಿ ಕ್ಷಣಾರ್ಧದಲ್ಲಿ ವ್ಯಾಪಿಸಿದೆ. ಬೆಂಕಿ ಹೊತ್ತಿಕೊಂಡ ವಿಚಾರ ತಿಳಿಯುತ್ತಿದ್ದಂತೆ ಎದೆಗುಂದದ ಚಾಲಕ, ಗ್ರಾಮದ ಜನವಸತಿ ಪ್ರದೇಶದಲ್ಲಿ ಅನಾಹುತ ತಪ್ಪಿಸಲು ಬೆಂಕಿ ಹತ್ತಿದ ಟ್ರ್ಯಾಕ್ಟರ್ ಅನ್ನು ವೇಗವಾಗಿ ಚಲಾಯಿಸಿಕೊಂಡು ಹೋಗಿದ್ದಾನೆ.**

ಗ್ರಾಮದ ರಸ್ತೆಗಳಲ್ಲಿ ಬೆಂಕಿ ಉಂಡೆಯಂತೆ ಸಾಗುತ್ತಿದ್ದ ಟ್ರ್ಯಾಕ್ಟರ್ ಕಂಡು ಜನರು ದಿಕ್ಕಾಪಾಲಾಗಿ ಓಡಿದ್ದಾರೆ. ಚಾಲಕ ಸಮಯಪ್ರಜ್ಞೆ ಮೆರೆದು ನೇರವಾಗಿ ಸಮೀಪದ 'ವಾಟರ್ ಸರ್ವಿಸ್ ಸೆಂಟರ್'ಗೆ ಟ್ರ್ಯಾಕ್ಟರ್ ಚಲಾಯಿಸಿಕೊಂಡು ಬಂದಿದ್ದಾನೆ. ಕೂಡಲೇ ಅಲ್ಲಿದ್ದ ಹೈ–ಪ್ರೆಶರ್ ಪಂಪ್‌ಗಳ ಮೂಲಕ ನೀರಿನ ಸಿಂಪಡಣೆ ಮಾಡಿ ಬೆಂಕಿ ನಂದಿಸುವ ಪ್ರಾಥಮಿಕ ಪ್ರಯತ್ನ ಮಾಡಲಾಯಿತು. ಬಳಿಕ ಅಗ್ನಿಶಾಮಕ ದಳಕ್ಕೆ ವಿಷಯ ತಿಳಿಸಿದ್ದು, ಕ್ಷಣಾರ್ಧದಲ್ಲಿ ಸ್ಥಳಕ್ಕಾಗಮಿಸಿದ ಸಿಬ್ಬಂದಿಗಳು ಕಾರ್ಯಾಚರಣೆ ನಡೆಸಿ ಸಂಪೂರ್ಣವಾಗಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾದರು. ಅಗ್ನಿಶಾಮಕ ದಳ ಮತ್ತು ಸ್ಥಳೀಯರ ಸಕಾಲಿಕ ಸ್ಪಂದನೆಯಿಂದಾಗಿ ಕಬ್ಬು ಸುಟ್ಟು ಹೋಗಿದ್ದರೂ, ಟ್ರ್ಯಾಕ್ಟರ್ ಇಂಜಿನ್ ಹಾಗೂ ಹೆಚ್ಚಿನ ಆಸ್ತಿಪಾಸ್ತಿ ಹಾನಿಯಾಗುವುದು ತಪ್ಪಿದೆ.

## ಸೇವಿಸುವ ಆಹಾರ ಸುರಕ್ಷಿತವಾಗಿ ಇರುವ ಬಗ್ಗೆ ಖಚಿತಪಡಿಸಿಕೊಳ್ಳಿ :ಡಾ ಪ್ರಜ್ವಲ್‌ಕುಮಾರ್.



❑ ನೈಜ್ಯ ದೆಸೆ ನ್ಯೂಸ್

**ಮನೆಯ ಕುಟುಂಬದ ಅದರಲ್ಲೂ ಮನೆಯ ಮಹಿಳೆಯರ ಗೌರವಕ್ಕಾಗಿ ಶೌಚಾಲಯ ಬಳಕೆ ಪ್ರತಿಯೊಬ್ಬರ ಆಧ್ಯತೆಯಾದಲ್ಲಿ ರಕ್ತಹೀನತೆ, ಅಪೌಷ್ಠಿಕತೆ ಮತ್ತು ವಾಂತಿ– ಭೇದಿಯಾಗುವುದನ್ನು ತಡೆಗಟ್ಟಲು ಸಾಧ್ಯವಿದೆ, ಅಲ್ಲದೆ ಆಹಾರ ಸುರಕ್ಷಿತವಾಗಿಟ್ಟುಕೊಳ್ಳುವ ಮೂಲಕ ಆದ–'ಷ್ಟು ಬಿಸಿಯಾದ ಆಹಾರ ಪದಾರ್ಥ ಸೇವಿಸುವ ಜೊತೆಗೆ ಕುಡಿಯುವ ನೀರನ್ನು ಸುರಕ್ಷಿತವಾಗಿರಿಸಿ ಕುದಿಸಿ ಆರಿಸಿ ಸೋಸಿ ಕುಡಿಯುವ ಮೂಲಕ ಆಕಸ್ಮಿಕವಾಗಿ ಉಂಟಾಗಬಹುದಾಗ ಸಂಭಾವ್ಯ ವಾಂತಿ–ಭೇದಿ ತಡೆಗಟ್ಟಬಹುದು ಎಂದು ತಾಲೂಕಾ ಅರೋಗ್ಯಾಧಿಕಾರಿ ಡಾ ಪ್ರಜ್ವಲ್‌ಕುಮಾರ ಸಾರ್ವಜನಿಕರಲ್ಲಿ ಆರೋಗ್ಯ ಶಿಕ್ಷಣದ ಮೂಲಕ ಮನವಿ ಮಾಡಿದರು.**

ರಾಯಚೂರು ನಗರದ ಎಲ್‌ಬಿ–ಎಸ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಯ ಆಶ್ರಯ ಕಾಲೂನಿ, ಎಲ್‌ಬಿ–ಎಸ್ ನಗರ ಮುಂತಾದೆಡೆ, ಶೌಚಾಲಯಗಳ ಬಳಕೆಯ ಮಹತ್ವ, ಕುರಿತು ಜಾಗೃತಿ ಕಾರ್ಯದಲ್ಲಿ ಮಾತನಾಡುತ್ತಾ, ಬಯಲು ಶೌಚದಿಂದ ನೊಣಗಳು ಹೆಚ್ಚಾಗುವವು, ಮಕ್ಕಳಿಗೆ ಜಂತುಹುಳು ಕಂಡು ಬರುವುದ–ರಿಂದ ರಕ್ತಹೀನತೆಯಿಂದಾಗಿ ಮಕ್ಕಳ ಕುಂಟಿತ ಬೆಳವಣಿಗೆ, ಮೇಲಿಂದ ಮೇಲೆ ರೋಗಗಳಿಗೆ ತುತ್ತಾಗುವ ಸಾಧ್ಯತೆಗಳಿವೆ. ಈ ದಿಶೆಯಲ್ಲಿ ಸಾರ್ವಜನಿಕರು ಮಹಾನಗರಪಾಲಿಕೆಯ ಸಲಹೆಗಳನ್ನು ಅನುಸರಿಸಿ ಶೌಚಾಲಯಗಳ ಬಳಕೆಗೆ ಆಧ್ಯತೆ ನೀಡಿ ಎಂದರು.

ವಾಂತಿ–ಭೇದಿ ತಡೆಗೆ ಸಹಕರಿಸಿ ನಗರದ ಬಡಾವಣೆಗಳಲ್ಲಿ ಪಾಲಿಕೆಯಿಂದ ಕುಡಿಯಲು ಸರಬುರಾಜು ಮಾಡುವ ನೀರು ಸಂಗ್ರಹಿಸಲು ಮನೆ ಮುಂದೆ ಇರುವ ನಳಗಳನ್ನು ತೆಗ್ಗಿನಲ್ಲಿ ಇರದಂತೆ ಜಾಗೃತಿವಹಿಸಿ, ಯಾಕೆಂದರೆ ತಗ್ಗಿನಲ್ಲಿ ಸಂಗ್ರಹಿಸಿದ ನೀರು ಪೈಪ್‌ನಲ್ಲಿ ಪುನಃ ಹೋಗುವ ಸಾಧ್ಯತೆ ಇರುತ್ತದೆ ಇದ–ರಿಂದ ವಾಂತಿ–ಭೇದಿಯಾಗುವ ಸಾಧ್ಯತೆಯು ಹೆಚ್ಚು. ಈ ಹಿನ್ನೆಲೆ ಮಹಾನಗರ ಪಾಲಿಕೆ ಸರಬುರಾಜು ಮಾಡುವ ನೀರನ್ನು ನಳದ ಮೂಲಕ ಸಂಗ್ರಹಿಸುವ ಪೂರ್ವದಲ್ಲಿ ಎರಡು ಮೂರು ನಿಮಿಷ ಹರಿಯಲು ಬಿಡಿ, ಮನೆಯ ಮುಂದೆ, ಬಡಾವಣೆಗಳಲ್ಲಿ ನೀರಿನ ಪೈಪ್ ಸೋರಿಕೆಯಾಗುತ್ತಿದ್ದರೆ ತಕ್ಷಣವೇ ಅರೋಗ್ಯ ಇಲಾಖೆ ಅಥವಾ ಮಹಾನಗರಪಾಲಿಕೆಗೆ ತಿಳಿಸಿ ಎಂದು ವಿನಂತಿದರು.

ಅಲ್ಲದೆ ಮನೆಯ ಆವರಣದಲ್ಲಿ ನೀರು ಸಂಗ್ರಹ ಮಾಡಿಕೊಳ್ಳುವ ಸಂಪ್‌ಗಳಿಗೆ ಬಸಿ ನೀರು ಬರದಿರುವಂತೆ ಮುಂಜಾಗೃತೆ ವಹಿಸಿ ಹಾಗೂ ಊಟದ ಪೂರ್ವ, ಶೌಚದ ನಂತರ ಕೈಗಳನ್ನು ಸಾಬೂನು ಮತ್ತು ನೀರಿನಿಂದ ಕನಿಷ್ಟ 20 ಸೆಕೆಂಡ್ ತೊಳೆದುಕೊಳ್ಳಲು, ರಸ್ತೆ ಬದಿ ತೆರದಿಟ್ಟ ಆಹಾರ ಸೇವಿಸದಂತೆ, ಕುಡಿಯುವ ನೀರನ್ನು ಸರಿಯಾಗಿ ಮುಚ್ಚಳ ಮುಚ್ಚುವಂತೆ, ವಾಂತಿ ಭೇದಿ ಬಾಧಿತರಿಗೆ ಅರೋಗ್ಯ ಇಲಾಖೆಯ ಸಿಬ್ಬಂದಿಯವರು ಕೊಡುವ ಜೀವಜಲ ಓಆರ್–ಎಸ್ ದ್ರಾವಣವನ್ನು ಶುದ್ಧ ನೀರಿನಲ್ಲಿ ತಯಾರಿಸಿ ಇಪ್ಪತ್ನಾಲ್ಕು ಗಂಟೆಯೊಳಗೆ ಬಳಸಲು, ವಾಂತಿ ಭೇದಿ ಕಂಡು ಬಂದಲ್ಲಿ ಹತ್ತಿರದ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ರಿಮ್ಸ್ ಆಸ್ಪತ್ರೆಯಲ್ಲಿ ಉಚಿತ ಚಿಕಿತ್ಸೆ ಲಭ್ಯವಿದ್ದು ದಯವಿಟ್ಟು ಪಡೆಯಲು ವಿನಂತಿಸಿದರು. ಈ ಸಂದರ್ಭದಲ್ಲಿ ಡಾ ಸುನೀತಾ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸುರೇಶ, ಹೆಚ್‌ಐಓ ತಿಪ್ಪೇಸ್ವಾಮಿ, ಪಿಹೆಚ್‌ಸಿಓ ವಸಂತಕುಮಾರಿ, ಪವಿತ್ರಾ, ಅಶಾ ಕಾರ್ಯಕರ್ತೆಯರಾದ ಈರಮ್ಮ, ಸುಮಿತ್ರಾ ಸೇ–ರಿದಂತೆ ಇತರರು ಉಪಸ್ಥಿತರಿದ್ದರು.

## ಪಶ್ಚಿಮ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವ್ಯಕ್ತಿ ಕಾಣೆ: ಪತ್ತೆಗೆ ಮನವಿ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 12 (ಕರ್ನಾಟಕ ವಾರ್ತೆ): ಇಲ್ಲಿನ ಪಶ್ಚಿಮ ಪೊಲೀಸ್ ಠಾಣೆ ವ್ಯಾಪ್ತಿಯ ಅಸ್ಕಿಹಾಳ ನಿವಾಸಿ ಆಂಜನೇಯ (62) ಅವರು ಸೆಪ್ಟೆಂಬರ್ 14ರ ಮಧ್ಯಾಹ್ನ 12.30ಕ್ಕೆ ಮನೆಯಲ್ಲಿ ಊಟ ಮಾಡಿ ಹೊರಗೆ ಹೋದವನ್ನು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ಠಾಣಾ ಅಪರಾಧ ಸಂಖ್ಯೆ: 128/2025 ಕಲಂ ಮನುಷ್ಯ ಕಾಣೆ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.**



ಕಾಣೆಯಾದ ತಮ್ಮ ತಂದೆಯ ಮೊಬೈಲ್ ಸಂಖ್ಯೆ: 9008104144ಗೆ ಅಂ–ದು ಸಂಜೆ ಕರೆ ಮಾಡಿ ವಿಚಾರಿಸಿದಾಗ ಅವರು ಬರುತ್ತೇನೆ ಬಿಡು ಎಂದು ಸಿಟ್ಟು ಮಾಡಿದರು. ನಂತರ ಸಂಜೆ 4 ಗಂಟೆಗೆ ಕರೆ ಮಾಡಿದಾಗ ಅವರ ಮೊಬೈಲ್ ಸ್ವಿಚ್ಡ್ ಆಫ್ ಬಂದಿದೆ. ಕಾಣೆಯಾದ ತಮ್ಮ ತಂದೆಯ ಬಗ್ಗೆ ಸಂಬಂಧಿಕರ ಮನೆಯಲ್ಲಿ ಹುಡುಕಾಡಿದಾಗ ಪತ್ತೆಯಾಗಿರುವುದಿಲ್ಲ ಎಂದು ಕಾಣೆಯಾದ ಆಂಜನೇಯ ಅವರ ಪುತ್ರ, ನಾಗರಕಟ್ಟೆಯ ಕೃಷ್ಣಮೆಡೌಸ್‌ನಲ್ಲಿ ವಾಚಮನ್ ಆಗಿ ಕೆಲಸ ಮಾಡುವ ರಮೇಶ ಅವರು ದೂರು ದಾಖಲಿಸಿದ್ದಾರೆ. ಕಾಣೆಯಾದ ವ್ಯಕ್ತಿಯ ಚಹರೆ: ಕಾಣೆಯಾದ ಆಂಜನೇಯ ಅವರು 5.6 ಎತ್ತರ, ತೆಳ್ಳನೆಯ ಮೈಕಟ್ಟು, ಗೋಧಿ ಮೈಬಣ್ಣ, ಉದ್ದನೆಯ ಮುಖ, ತಲೆಯಲ್ಲಿ ಕಪ್ಪು ಕೂದಲು ಹೊಂದಿದ್ದು, ಬಿಳಿ ಪಂಚೆ, ಬಿಳಿ ಜುಬ್ಬ ಹಾಗೂ ಹಸಿರು ಟಾವೆಲ್ ಬಟ್ಟೆಗಳನ್ನು ಧರಿಸಿರುತ್ತಾರೆ. ಕನ್ನಡ, ತೆಲುಗು, ಇಂಗ್ಲೀಷ್ ಹಾಗೂ ಹಿಂದಿ ಭಾಷೆ ಮಾತನಾಡುತ್ತಾರೆ. ಈ ವ್ಯಕ್ತಿಯ ಬಗ್ಗೆ ಸುಳಿವು ಕಂಡುಬಂದಲ್ಲಿ ಪಶ್ಚಿಮ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 08532–232570, ಪಿ.ಎಸ್.ಐ ಮೊಬೈಲ್ ಸಂಖ್ಯೆ: 9480803847, ಪಶ್ಚಿಮ ವೃತ್ತ ಸಿ.ಪಿ.ಐ ಮೊಬೈಲ್ ಸಂಖ್ಯೆ: 9480803831, ಜಿಲ್ಲಾ ನಿಸ್ತಂತು ಘಟಕ ರಾಯಚೂರು ದೂರವಾಣಿ ಸಂಖ್ಯೆ: 08532–235635, 9480803800ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಪಶ್ಚಿಮ ಪೊಲೀಸ್ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾಡೆಲ್ ಹಿರಿಯ ಪ್ರಾಥಮಿಕ ಶಾಲೆ, ಕವಿತಾಳದಲ್ಲಿ ಸ್ವಾಮಿ ವಿವೇಕಾನಂದ ಜಯಂತಿ ಯುವ ಮನಸ್ಸುಗಳಿಗೆ ಹೊಸ ಚೈತನ್ಯ

❑ ನೈಜ್ಯ ದೆಸೆ ನ್ಯೂಸ್

**ಕವಿತಾಳ: ಜನವರಿ 12 ಕವಿತಾಳ ಪಟ್ಟಣದ ಮಾಡೆಲ್ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಭಾರತದ ಮಹಾನ್ ತತ್ವಜ್ಞಾನಿ, ಯುಗದರ್ಶಿ ಹಾಗೂ ಯುವಶಕ್ತಿಯ ಪ್ರತೀಕವಾಗಿರುವ ಸ್ವಾಮಿ ವಿವೇಕಾನಂದರ ಜಯಂತಿಯನ್ನು 'ರಾಷ್ಟ್ರೀಯ ಯುವ ದಿನ'ವಾಗಿ ಅತ್ಯಂತ ಅರ್ಥಪೂರ್ಣವಾಗಿ ಹಾಗೂ ಸಂಭ್ರಮದಿಂದ ಆಚರಿಸಲಾಯಿತು.**

ಕಾರ್ಯಕ್ರಮಕ್ಕೆ ಶಾಲಾ ಆವರಣವನ್ನು ಸುಂದರವಾಗಿ ಅಲಂಕರಿಸಲಾಗಿದ್ದು, ಬೆಳಿಗ್ಗೆಯೇ ವಿದ್ಯಾರ್ಥಿಗಳಿಂದ ಪ್ರಾರ್ಥನಾ ಗೀತೆಯೊಂದಿಗೆ ಕಾರ್ಯಕ್ರಮ ಆರಂಭವಾಯಿತು. ಸ್ವಾಮಿ ವಿವೇಕಾನಂದರ ಭಾವಚಿತ್ರಕ್ಕೆ ಶಾಲೆಯ ಮುಖ್ಯ ಶಿಕ್ಷಕರು, ಹಿರಿಯ ಶಿಕ್ಷಕರು ಹಾಗೂ ವಿದ್ಯಾರ್ಥಿ ಪ್ರತಿನಿಧಿಗಳು ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯ ಶಿಕ್ಷಕಿ ಶಬಾನಾ ಆಯಿಷಾ, "ಸ್ವಾಮಿ ವಿವೇಕಾನಂದರು



ಯುವಕರಲ್ಲಿ ಆತ್ಮವಿಶ್ವಾಸ, ಶಿಸ್ತು ಮತ್ತು ರಾಷ್ಟ್ರಭಕ್ತಿ ಬೆಳೆಸಿದ ಮಹಾನ್ ಚೇತನ. ಅವರ ಆದ–'ರ್ಶಗಳು ಇಂದಿನ ಪೀಳಿಗೆಗೆ ಮಾರ್ಗದರ್ಶಕ ಶಕ್ತಿಯಾಗಿವೆ. ವಿದ್ಯಾರ್ಥಿಗಳು ಮೊಬೈಲ್ ಮತ್ತು ಆಲಸ್ಯದಿಂದ ದೂರವಿದ್ದು ಅಧ್ಯಯನ, ಶ್ರಮ ಹಾಗೂ ಮೌಲ್ಯಾಧಾರಿತ ಜೀವನಕ್ಕೆ ಒತ್ತು ನೀಡಬೇಕು" ಎಂದು ಸಲಹೆ ನೀಡಿದರು.

ಶಿಕ್ಷಕರು ಸ್ವಾಮಿ ವಿವೇಕಾನಂದರ ಬಾಲ್ಯ ಜೀವನ, ಸಂನ್ಯಾಸ ಸ್ವೀಕಾರ, ರಾಮಕೃಷ್ಣ ಪರಮಹಂಸರ ಶಿಷ್ಯತ್ವ, ಚಿಕಾಗೋ ವಿಶ್ವ ಧರ್ಮಸಮ್ಮೇಳನದಲ್ಲಿ ನೀಡಿದ ಐತಿಹಾಸಿಕ ಭಾಷಣ ಹಾಗೂ ಭಾರತದ ಆದ–'ಧ್ಯಾತ್ಮಿಕ ಶಕ್ತಿಯನ್ನು ಜಗತ್ತಿಗೆ ಪರಿಚಯಿಸಿದ ವಿಚಾರಗಳನ್ನು ವಿವರಿಸಿದರು. "ನೀವು ನಿಮ್ಮ ಮೇಲೆ ನಂಬಿಕೆ ಇಟ್ಟರೆ, ಜಗತ್ತೇ ನಿಮ್ಮ ಹಿಂದೆ ಬರುತ್ತದೆ" ಎಂಬ ಅವರ ನುಡಿಮುತ್ತು ವಿದ್ಯಾರ್ಥಿಗಳಲ್ಲಿ ಅಪಾರ ಉತ್ಸಾಹ ಮೂಡಿಸಿತು. ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳು ಪ್ರಬಂಧ ವಾಚನ, ಭಾಷಣ, ನುಡಿಮುತ್ತುಗಳ ಪಠಣ, ಗೀತೆ ಹಾಗೂ ಚಿಂತನಾತ್ಮಕ ಮಾತುಗಳ ಮೂಲಕ ಸ್ವಾಮಿ ವಿವೇಕಾನಂದರ ಸಂದೇಶಗಳನ್ನು ಮನಮುಟ್ಟುವಂತೆ ಪ್ರಸ್ತುತಪಡಿಸಿದರು.

ವಿದ್ಯಾರ್ಥಿಗಳ ಆತ್ಮವಿಶ್ವಾಸಭ–ರಿತ ಪ್ರದರ್ಶನ ಕಾರ್ಯಕ್ರಮಕ್ಕೆ ಮತ್ತಷ್ಟು ಶೋಭೆ ತಂದಿತು. ಈ ಆಚರಣೆ ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣಗಳು, ಶಿಸ್ತುಬದ್ಧ ಜೀವನ ಶೈಲಿ, ಮಾನವೀಯ ಮೌಲ್ಯಗಳು ಹಾಗೂ ದೇಶಸೇವೆಯ ಮನೋಭಾವ ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸಿತು. ಕಾರ್ಯಕ್ರಮದ ಅಂತ್ಯದಲ್ಲಿ ಸ್ವಾಮಿ ವಿವೇಕಾನಂದರ ಆದ–'ರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಪ್ರತಿಜ್ಞೆಯನ್ನು ಎಲ್ಲರೂ ಕೈಗೊಂಡರು. ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕ ವೃಂದ, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಪೋಷಕರು ಉಪಸ್ಥಿತರಿದ್ದು ಕಾರ್ಯಕ್ರಮದ ಯಶಸ್ಸಿಗೆ ಸಹಕಾರ ನೀಡಿದರು.

# ಕವಿ ಮತ್ತು ಕವಿತೆ ಕಾಲದ ಪ್ರತಿಬಿಂಬ–ಸಾಹಿತಿ ಸಿದ್ದನಗೌಡ ಬಿಜ್ಜೂರ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟೆ: ಕವಿಗೆ ಸಾಮಾಜಿಕ ಕಳಕಳಿಯೊಂದಿಗೆ ಆತನ ಚಿಂತನಾ ಲಹರಿ ವಿಭಿನ್ನವಾಗಿರುತ್ತದೆ.ಆ ಕಾರಣದಿಂದ ಕವಿ ಮತ್ತು ಕವಿತೆ ಆ ಕಾಲ ಘಟ್ಟದ ಪ್ರತಿಬಿಂಬ ಎನ್ನುತ್ತೇವೆ ಎಂದು ಯುವ ಸಾಹಿತಿ ಸಿದ್ದನಗೌಡ ಬಿಜ್ಜೂರ ಮಾತನಾಡಿದರು. ನಗರದ ಪ್ರತಿಭಾಲೋಕ ಕರಿಯರ್ ಅಕಾಡೆಮಿಯಲ್ಲಿ ಕನ್ನಡ ಸಂಘದ ವತಿಯಿಂದ ರವಿವಾರ ಹಮ್ಮಿಕೊಂಡ ಕವಿಗೋಷ್ಠಿಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.**




ಇದೆ ಸಂದರ್ಭದಲ್ಲಿ ಅವರು ಮಾತನಾಡಿ ಕವಿತೆಗೆ ಒಂದು ಶಕ್ತಿಯಿದೆ,ಅದು ಅಕ್ಷರಗಳ ಜೋಡಣೆ ಅಲ್ಲ,ಭಾವಸಂಬಂಧವನ್ನು ಹೊಂದಿದೆ.ಒಬ್ಬ ವೃದ್ಧ ಹೇಳುವಂತೆ ನಾವು ಸವೆಸಿದ ಅದ್ಭುತ ಬದುಕಿನ ಹಾದಿಯೇ ಕವಿತೆ ಎಂದರು.ಕವನಗಳು ಆ ಕಾಲದ ಪರಂಪರೆಯ ಧ್ವನಿಯಾಗಿ ಪ್ರತಿನಿಧಿಸುತ್ತವೆ ಎಂದರು. ಕವಿಗೋಷ್ಠಿಯಲ್ಲಿ ವಿಜಯಪುರ,ಮುದ್ದೇಬಿಹಾಳ, ಬಸವನ ಬಾಗೇವಾಡಿ,ಹಲಸಂಗಿ ಹೀಗೆ ಜಿಲ್ಲೆಯ ವಿವಿಧ ಕಡೆಗಳಿಂದ ಹದಿನೆಂಟಕ್ಕೂ ಅಧಿಕ ಕವಿಗಳು ಭಾಗವಹಿಸಿ,ಸಂಕ್ರಾಂತಿ ,ಹೊಸವರ್ಷ,ಕನ್ನಡ ನಾಡುನುಡಿಕುರಿತಾಗಿ ಕವನ ವಾಚಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಆರ್.ಬಿ.ದಮ್ಮೂರಮಠ ಅವರು ಮಾತನಾಡಿ ಕವಿಯು ಕವಿತೆಯನ್ನು ತನ್ನ ಖುಷಿಗಾಗಿ,ನೋವಿಗೆ,ನಲಿವಿಗೆ,ಕಿಚಿ–'ಚ್ಚಿಗೆ,ರೊಚ್ಚಿಗೆ ಬರೆಯುತ್ತಾನೆ.ಕವಿತೆ ಮಹಾದಾನಂದ ನೀಡುತ್ತದೆ ಎಂದರು.

ಕವಿಗೋಷ್ಠಿಯಲ್ಲಿ ಭಾಗವಹಿಸಿದ ಶಾಂತಾ ಬಿರಾದಾರ ಅವರು ಚಂದದ ನಾಡು ಎಂಬ ಕವಿತೆಯನ್ನು ಜವಾರಿ ಭಾಷೆಯಲ್ಲಿ ,ಶರಣಗೌಡ ಕೋಳೂರ ಅವರು ಹೊಸ ವರ್ಷ ಎಂಬ ಕವಿತೆಯನ್ನು ಸಾಂಪ್ರದಾಯಿಕ ಶೈಲಿಯಲ್ಲಿ ,ಸಿದ್ದನಗೌಡ ಕಾಸಿನಕುಂಟಿ ಅವರು ಕೃಷ್ಣೆ ಜೀವಗಂಗೆ ಎಂಬ ಕವಿತೆಯನ್ನು ವೈವಿಧ್ಯಮಯವಾಗಿ, ಕೀರ್ತಿ ನಿಂಗನಗೌಡ ಪಾಟೀಲ್ ಅವರು ಹೊಸ ವರ್ಷದ ಸಂತೆ ಎಂಬ ಕವಿತೆಯನ್ನು ಸಾಮಾಜಿ–ಕ ಕಳಕಳಿಯ ಹಿನ್ನೆಲೆಯಲ್ಲಿ ,ಮಹಾದೇವಿ.ಕೆ ಪಾಟೀಲ್ ಅವರು ನೋವಿನ ಪಯಣ ಎಂಬ ಕವಿತೆಯಲ್ಲಿ ಜನಮನಕ್ಕೆ ತಿಳಿಯುವ ರೀತಿನಲ್ಲಿ, ಹಣಮಗೌಡ ಕರಕಳ್ಳಿ ವರು ಬೇತಾಳನ ಪ್ರಶ್ನೆ ಎಂಬ ಕವನವನ್ನು ಅನೇಕ ಪ್ರತಿಮೆಗಳ ಮೂಲಕ, ಸುವರ್ಣ ಗೋನಾಳ ಅವರು ಸಂಕ್ರಾಂತಿ ಎಂಬ ಪದ್ಯವನ್ನು ಸುಕುಮಾರಶೈಲಿಯಲ್ಲಿ,

ಮಡಿವಾಳಪ್ಪಗೌಡ ನೀರಲಗಿ ಕನ್ನಡ ನಾಡು ನುಡಿ ಬಗ್ಗೆ, ಭಾಗ್ಯಶ್ರೀ ಕಾರಜೋಳವರು ಕನ್ನಡ ನಾಡು ಎಂಬ ಕವಿತೆಯನ್ನು ಸುಂದರವಾಗಿ, ಬಾಬು ಅಗಸರವರು ಸಮೃದ್ಧಿ ಅನ್ನುವ ಕವಿತೆಯನ್ನು ,ಮಾಜಿ ಸೈನಿಕರಾದ ಮೌಲಾಸಾಬ ಮೊಕಾಸಿಯವರು ಹೊಸ ವರ್ಷದ ಕುರಿತು, ರಾಹುಲ ರಜಪೂತ ಅವರು ಗುರುವಿನ ಕುರಿತ ಕವಿತೆಯ ಆದಿ ಮಧ್ಯ ಅಂತ್ಯ ಪ್ರಾಸಗಳೊಂದಿಗೆ,ಗುಂಡುರಾವ್ ಧನಪಾಲ ಅವರು ಹೊಸ ವರ್ಷದ ಕುರಿತಾದ ಸಾಮಾಜಿಕ ವಿಡಂಬನ ಕವಿತೆಯನ್ನು ವಾಚಿಸಿದರು.ಚಂದ್ರಗೌಡ ಕುಲಕರ್ಣಿ ಅವರ ಬರೆದ ಕನ್ನಡ ಪರಂಪರೆ ಎಂಬ ಕನ್ನಡ ನಾಡಿನ ವೈಭವದ ಕವಿತೆಯನ್ನು ಶ್ರೀಕಾಂತ ಪತ್ತಾರ ಅವರು ವಾಚಿಸಿದರು.

ಸಾಹೇಬಗೌಡ ಬಿರಾದಾರ ಅವರು ಸವಿತಾ ಇನಾಂದಾರ್ ಅವರು ರಚಿಸಿದ ಬಿಳಿ ಬಟ್ಟೆಯನ್ನು ಅತ್ಯಂತ ಗತ್ತು ಗಮ್ಮತ್ತಿನ ಜವಾರಿ ಭಾಷೆಯಲ್ಲಿ ವಾಚಿಸಿದರು ಹಾಗೂ ಬಸವರಾಜ ಗೊರಜಿಯವರು ರೈತರ ಗೋಳು ಎಂಬ ಕವಿತೆಯನ್ನು ಹಾಗೂ ಸುಮಂಗಲಾ ಕೋಳೂರವರು ತುಫಾನ್ ಎಂಬ ಕವಿತೆಯ ಮೂಲಕ ಜೀವನದ ಸಮಸ್ಯೆಗಳನ್ನು ಹಾಗೂ ಎ.ಎಲ್.ನಾಗೂರ ರಚಿಸಿದ ಕೆಂಪಾದವು ಎಂಬ ಕವಿತೆಯನ್ನು ಮಹಾಂತೇಶ ಮುರಾಳವರು ವಾಚನವನ್ನು ಮಾಡಿದರು. ವೇದಿಕೆಯ ಮೇಲೆ ಕನ್ನಡ ಸಂಘದ ಉಪಾಧ್ಯಕ್ಷರಾದ ಶ್ರೀ ಆರ್.ಬಿ.ದಮ್ಮೂರಮಠ ಅವರು ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ್ದರು.

ಕನ್ನಡ ಸಂಘದ ಉಪಾಧ್ಯಕ್ಷರಾದ ಶ್ರೀಮತಿ ಸುಮಂಗಲಾ ಕೋಳೂರ ಅವರು,ಶ್ರೀ ಬಸವರಾಜ ಗೊರಜಿ,ಮಹಾಂತೇಶ ಮುರಾಳ,ಬಿ,–ಎಸ್ ದ್ಯಾಪೂರ ಅವರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಶಿಕ್ಷಕ ಸಾಹಿತಿ ಶ್ರೀ ಸಾಹೇಬಗೌಡ ಬಿರಾದಾರ ಕಾರ್ಯಕ್ರಮ ನಿರೂಪಿಸಿದರು. ಚಿಂತಕರಾದ ಶ್ರೀ ದಿನಕರ ಜೋಷಿ ಅವರು ಸ್ವಾಗತಿಸಿದರು.ಶ್ರೀ ಶ್ರಿಕಾಂತ ಕಟ್ಟಿಮನಿ ಪ್ರಾರ್ಥಿಸಿದರು. ವಾಗ್ಮಿಗಳಾದ ಹಾಗೂ ಕನ್ನಡ ಸಂಘದ ಪ್ರಧಾನ ಕಾರ್ಯದರ್ಶಿಗಳಾದ ಶ್ರೀಕಾಂತ ಪತ್ತಾರ ಅವರು ಪ್ರಾಸ್ತಾವಿಕ ಮಾತನಾಡಿದರು.ಕನ್ನಡ ಸಂಘದ ಸದಸ್ಯರಾದ ಬಸನಗೌಡ ಚೋಕಾವಿ ವಂದಿಸಿದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಎಂ. ಫಾರ್ಮ್ (ಫಾರ್ಮಾಸ್ಯುಟಿಕಲ್ ಬಯೋಟೆಕ್ನಾಲಜಿ)

ಎಂ. ಫಾರ್ಮ್ (ಫಾರ್ಮಾಸ್ಯುಟಿಕಲ್ ಬಯೋಟೆಕ್ನಾಲಜಿ) ಎರಡು ವರ್ಷಗಳ ಸ್ನಾತಕೋತ್ತರ ಕೋರ್ಸ್ ಆಗಿದ್ದು, ಇದು ಫಾರ್ಮಸಿ ಕ್ಷೇತ್ರದಲ್ಲಿ ಮತ್ತು ಔಷಧೀಯ ಉದ್ಯಮದಲ್ಲಿ ಜೈವಿಕ ತಂತ್ರಜ್ಞಾನದ ಅಂಶಗಳ ಮುಂದುವರಿದ ಅಧ್ಯಯನವನ್ನು ನೀಡುತ್ತದೆ. ಕೋರ್ಸ್ ಮೂಲಕ, ವಿದ್ಯಾರ್ಥಿಗಳು ಹೈಬ್ರಿಡೋಮಾಗಳು, ಬಯೋಟೆಕ್ ಫಾರ್ಮಾಸ್ಯುಟಿಕಲ್ ಡ್ರಗ್ಸ್, ಫಾರ್ಮಾಕೊಜೆನೋಮಿಕ್ಸ್ ಮತ್ತು ಫಾರ್ಮಾಸ್ಯುಟಿಕಲ್ ಬಯೋಟೆಕ್ನಾಲಜಿ ಉತ್ಪನ್ನಗಳಲ್ಲಿನ ಮ್ಯಾಕ್ರೋ ಮತ್ತು ಸೂಕ್ಷ್ಮಜೀವಿಗಳ ಬಗ್ಗೆಯೂ ಅಧ್ಯಯನ ಮಾಡುತ್ತಾರೆ. ಈ ಕೋರ್ಸ್‌ನ ಮುಖ್ಯ ಉದ್ದೇಶವೆಂದರೆ ವಿದ್ಯಾರ್ಥಿಗಳು ಈ ಕ್ಷೇತ್ರದಲ್ಲಿ ಪರಿಣಿತರಾಗಲು ತರಬೇತಿ ನೀಡುವುದು.ಅರ್ಹತೆ: ಬಿ.ಫಾರ್ಮ್ (B.Pharm) ಪದವಿ ಮಾನ್ಯ ವಿಶ್ವವಿದ್ಯಾಲಯದಿಂದ ಕನಿಷ್ಠ ಅಗತ್ಯ ಶೇಕಡಾವಾರು ಅಂಕಗಳು ಪ್ರವೇಶ ಪರೀಕ್ಷೆ/ಮೆರಿಟ್ ಆಧಾರಿತ ಪ್ರವೇಶ (ವಿಶ್ವವಿದ್ಯಾಲಯ/ರಾಜ್ಯ ನಿಯಮಗಳ ಪ್ರಕಾರ) ಕೋರ್ಸ್ ಅವಧಿ: 2 ವರ್ಷಗಳು (4 ಸೆಮಿಸ್ಟರ್‌ಗಳು) ಮುಖ್ಯ ವಿಷಯಗಳು: ಫಾರ್ಮಾಸ್ಯುಟಿಕಲ್ ಬಯೋಟೆಕ್ನಾಲಜಿ ಮೊಲೆಕ್ಯುಲರ್ ಬಯಾಲಜಿ ಮತ್ತು ಜೆನೆಟಿಕ್ ಎಂಜಿನಿಯರಿಂಗ್ ಹೈಬ್ರಿಡೋಮಾ ತಂತ್ರಜ್ಞಾನ ಮತ್ತು ಮೋನೋಕ್ಲೋನಲ್ ಆಂಟಿಬಾಡಿಗಳು ಬಯೋಟೆಕ್ನಾಲಜಿಕಲ್ ಔಷಧಗಳ ಅಭಿವೃದ್ಧಿ ಫಾರ್ಮಾಕೊಜೆನೋಮಿಕ್ಸ್ ಮತ್ತು ವೈಯಕ್ತಿಕ ವೈದ್ಯಕೀಯ ಸೂಕ್ಷ್ಮಜೀವಶಾಸ್ತ್ರ (Microbiology) ಬಯೋಇನ್ಫರ್ಮ್ಯಾಟಿಕ್ಸ್ ನಿಯಂತ್ರಣ ವ್ಯವಹಾರಗಳು (Regulatory Affairs) ಪ್ರಾಯೋಗಿಕ ತರಬೇತಿ ಮತ್ತು ಸಂಶೋಧನೆ: ಸುಧಾರಿತ ಪ್ರಯೋಗಾಲಯ ತರಬೇತಿ ಕೈಗಾರಿಕಾ ಇಂಟರ್ನ್‌ಶಿಪ್ ಸಂಶೋಧನಾ ಪ್ರಾಜೆಕ್ಟ್ ಮತ್ತು ಥೀಸಿಸ್ ಸೆಮಿನಾರ್‌ಗಳು ಮತ್ತು ವರ್ಕ್‌ಶಾಪ್‌ಗಳು ವೃತ್ತಿ ಅವಕಾಶಗಳು: ಬಯೋಟೆಕ್ ಮತ್ತು ಫಾರ್ಮಾಸ್ಯುಟಿಕಲ್ ಕಂಪನಿಗಳು ಸಂಶೋಧನಾ ಮತ್ತು ಅಭಿವೃದ್ಧಿ (R&D) ವಿಭಾಗ ಗುಣಮಟ್ಟ ನಿಯಂತ್ರಣ (QC) / ಗುಣಮಟ್ಟ ಭರವಸೆ (QA) ಕ್ಲಿನಿಕಲ್ ರಿಸರ್ಚ್ ಸಂಸ್ಥೆಗಳು ಅಕಾಡೆಮಿಕ್ ಮತ್ತು ಬೋಧನಾ ಕ್ಷೇತ್ರ ಸರ್ಕಾರ ಹಾಗೂ ಖಾಸಗಿ ಸಂಶೋಧನಾ ಸಂಸ್ಥೆಗಳು ಭವಿಷ್ಯದ ಅವಕಾಶಗಳು: ಪಿಎಚ್.ಡಿ (Ph.D) ವಿದೇಶಿ ಅಧ್ಯಯನ ಮತ್ತು ಸಂಶೋಧನಾ ಫೆಲೋಶಿಪ್‌ಗಳು ಉನ್ನತ ಮಟ್ಟದ ಸಂಶೋಧನಾ ಹುದ್ದೆಗಳು

## ರಾಯಚೂರು ಮಹಾನಗರ ಪಾಲಿಕೆಯಿಂದ ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಡಿ ಅರ್ಜಿ ಆಹ್ವಾನ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 12 (ಕರ್ನಾಟಕ ವಾರ್ತೆ): ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ 2019-20 ಹಾಗೂ 2024-25ನೇ ಸಾಲಿನ ಎಸ್.ಎಫ್.ಸಿ ನಿಧಿಯ ಶೇ.5ರ ಪರಿಷ್ಕೃತ ಕ್ರಿಯಾ ಯೋಜನೆಯಡಿ ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಡಿ ಪಾಲಿಕೆ ವ್ಯಾಪ್ತಿ ಪ್ರದೇಶದಲ್ಲಿ ಬರುವ ಅರ್ಹ ಫಲಾನುಭವಿಗಳಿಗೆ ವಿವಿಧ ಸೌಲಭ್ಯ ಒದಗಿಸಲು ಅರ್ಜಿ ಆಹ್ವಾನಿಸಲಾಗಿದೆ.**

2019-20 ಸಾಲಿನ ಶೇ.5ರಡಿ ಪರಿಶಿಷ್ಟ ಜಾತಿಯ ವಿಕಲಚೇತನರ ಮನೆಯ ಮೇಲ್ಛಾವಣೆ ದುರಸ್ಥಿಗಾಗಿ 2ಲಕ್ಷ ರೂ.ಗಳು ಹಾಗೂ 2024-25ನೇ ಸಾಲಿನ ಶೇ.5ರಡಿ ಪರಿಶಿಷ್ಟ ಜಾತಿಯ ವಿಕಲಚೇತನರ ಮನೆಯ ಮೇಲ್ಛಾವಣೆ ದುರಸ್ಥಿಗಾಗಿ 1.15ಲಕ್ಷ ರೂ.ಗಳನ್ನು ಕಾಯ್ದಿಸಲಾಗಿದೆ. ದಾಖಲಾತಿಗಳು: ನಿಗದಿತ ನಮೂನೆಯಲ್ಲಿ ಅರ್ಜಿ, ದೃಢೀಕೃತ ಜಾತಿ ಮತ್ತು ಆದಾಯ ಪ್ರಮಾಣ ಪತ್ರ (ಪ್ರಸಕ್ತ ಚಾಲ್ತಿ ಸಾಲು), ದೃಢೀಕೃತ ವಾಸಸ್ಥಳಕ್ಕೆ ಗುರುತಿನ ಚೀಟಿ/ರೇಷನ್ ಕಾರ್ಡ್, ಪಾಸ್ ಫೋಟೋ ಅಳತೆಯ 2 ಭಾವ ಚಿತ್ರ, ಬ್ಯಾಂಕ್ ಪಾಸ್ ಪುಸ್ತಕ್ ಹಾಗೂ ಐ.ಎಫ್.ಎಸ್.ಸಿ ಕೋಡ್‌ನೊಂದಿಗೆ ಬ್ಯಾಂಕ್ ವಿವರ, ವೈದ್ಯರಿಂದ ಪಡೆದ ಗುರುತಿನ ಚೀಟಿ/ಯು.ಡಿ.ಎ. ಕಾರ್ಡ್, ವಿಕಲಚೇತನರ 1 ಭಾವಚಿತ್ರ, ಮನೆಯ ದುರಸ್ಥಿ ಮೇಲ್ಛಾವಣೆ ಛಾಯಾಚಿತ್ರ ಹಾಗೂ ಮೊಬೈಲ್ ನಂಬರ್‌ನೊಂದಿಗೆ ಜನವರಿ 17ರೊಳಗಾಗಿ ಸಲ್ಲಿಸಬಹುದಾಗಿದೆ. ಅವದಿ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸರಿಯಾದ ದಾಖಲಾತಿಗಳು ಸಲ್ಲಿಸದೇ ಇದ್ದ ಪಕ್ಷದಲ್ಲಿ ತಮಗೆ ಯಾವುದೇ ಹಿಂಬರಹ ಕಳುಹಿಸದೇ ನೇರವಾಗಿ ವಿಭಾಗದ ಸಿಬ್ಬಂದಿಯವರು ತಿರಸ್ಕೃತ ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ನೋಟಿಸ್ ಬೋರ್ಡ್ ನೋಡಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ಆಯೋಜನೆ ಮಾಡಿ: ಬಸನಗೌಡ ದದ್ದಲ್ ಸಲಹೆ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 12 (ಕ.ವಾ.): ಬಹುವರ್ಷಗಳ ನಂತರ ರಾಯಚೂರು ಜಿಲ್ಲೆಯಲ್ಲಿ ಜನವರಿ 29, 30 ಹಾಗೂ 31ರಂದು ನಿಗದಿಯಾದ ಎಡೆದೊರೆ ನಾಡು ರಾಯಚೂರು ಉತ್ಸವ 2026ರ ಸಾಸ್ಕೃತಿಕ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ಆಯೋಜನೆ ಮಾಡಬೇಕು ಎಂದು ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ಶಾಸಕರಾದ ಬಸನಗೌಡ ದದ್ದಲ್ ಅವರು ಹೇಳಿದರು.**

ರಾಯಚೂರಿನ ತಾಲೂಕು ಪಂಚಾಯತ್ ಕಚೇರಿ ಸಂಭಾಗಣದಲ್ಲಿ ಜನವರಿ 12ರಂದು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಉತ್ಸವದ ಸಾಂಸ್ಕೃತಿಕ ಕಾರ್ಯಕ್ರಮಗಳ





ರೂಪರೇಷಗಳ ಕುರಿತು ಶಾಸಕರು, ಗ್ರಾಮೀಣ ಕ್ಷೇತ್ರದ ವಿವಿಧ ಕಲಾತಂಡಗಳು, ಸಾಹಿತಿಗಳು, ವಿದ್ವಾಂಸರು, ಲೇಖಕರು, ಕ್ರೀಡಾಸಕ್ತರು ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ಸಮಗ್ರ ಚರ್ಚಿಸಿ ಸೂಕ್ತ ಸಲಹೆ ಸೂಚನೆ ನೀಡಿದರು. ಸಂದರ್ಭದಲ್ಲಿ ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ, ಡಿಎಸ್ಪಿ ಶಾಂತವೀರ, ತಹಶೀಲ್ದಾರ್ ಸುರೇಶ ವರ್ಮ, ತಾಪಂ ಇಓ ಚಂದ್ರಶೇಖರ ಪವಾರ, ಎಪಿಎಂಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ಗ್ಯಾರಂಟಿ ಕಮಿಟಿಯ ತಾಲೂಕು ಅಧ್ಯಕ್ಷರಾದ ಪವನ ಕಿಶೋರ್ ಪಾಟೀಲ್, ಮುಖಂಡರಾದ ನಾಗೇಂದ್ರಪ್ಪ ಮಟಮಾರಿ, ಇನ್ನೀತರ ಮುಖಂಡರು, ಅಧಿಕಾರಿಗಳು ಹಾಗೂ ಕಲಾ ಬಳಗದವರು ಉಪಸ್ಥಿತರಿದ್ದರು.

# ಮಸ್ಕಿಯಲ್ಲಿ ರಾಷ್ಟ್ರೀಯ ಯುವ ದಿನಾಚರಣೆ ಅಂಗವಾಗಿ ಕ್ವಿಜ್ ಕಾರ್ಯಕ್ರಮ



❑ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಜನವರಿ 12: ಲಯನ್ಸ್ ಕ್ಲಬ್ ಮಸ್ಕಿ, ಹೆಡ್ ಹೆಲ್ಡ್ ಹೈ ಫೌಂಡೇಶನ್ ಮಸ್ಕಿ ಹಾಗೂ ಹೈಟೆಕ್ ಕಂಪ್ಯೂಟರ್ ಶಿಕ್ಷಣ ತರಬೇತಿ ಕೇಂದ್ರ ಮಸ್ಕಿ ಇವರ ಸಂಯುಕ್ತಾಶ್ರಯದಲ್ಲಿ ವೀರ ಸನ್ಯಾಸಿ ಸ್ವಾಮಿ ವಿವೇಕಾನಂದರ 163ನೇ ಜಯಂತಿ ಹಾಗೂ ರಾಷ್ಟ್ರೀಯ ಯುವ ದಿನಾಚರಣೆ ಅಂಗವಾಗಿ ಮಸ್ಕಿ ತಾಲ್ಲೂಕಿನ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳಿಗಾಗಿ ಕ್ವಿಜ್ (ರಸಪ್ರಶ್ನೆ) ಕಾರ್ಯಕ್ರಮವನ್ನು ಇಂದು ಗಚ್ಚಿನಮಠ ಮಸ್ಕಿಯಲ್ಲಿ ಹಮ್ಮಿಕೊಳ್ಳಲಾಗಿತ್ತು.**

ಕಾರ್ಯಕ್ರಮವು ಬೆಳಿಗ್ಗೆ 9 ಗಂಟೆಗೆ ಆರಂಭವಾಗಿದ್ದು, ತಾಲ್ಲೂಕಿನ ವಿವಿಧ ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿದ್ದರು. ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಷ.ಬ್ರ. ಪರಮಪೂಜ್ಯ ಶ್ರೀ ವರ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು (ಗಚ್ಚಿನ ಹಿರೇಮಠ, ಮಸ್ಕಿ) ವಹಿಸಿದ್ದರು. ಲಯನ್ಸ್ ಕ್ಲಬ್ ಮಸ್ಕಿ ಅಧ್ಯಕ್ಷರಾದ ವೀರೇಶ ಹಿರೇಮಠ ಅಧ್ಯಕ್ಷತೆಯನ್ನು ವಹಿಸಿದ್ದರು. ಈ ಸಂದರ್ಭದಲ್ಲಿ ಗಂಗಾಧರ ಶಕ್ತಿನಗರ (ಹೆಡ್ ಹೆಲ್ಡ್ ಹೈ ಫೌಂಡೇಶನ್ ತರಬೇತುದಾರರು), ಯಮನೂರ ಕನ್ನಾರಿ (ವ್ಯವಸ್ಥಾಪಕರು, ಹೈಟೆಕ್ ಕಂಪ್ಯೂಟರ್ ಶಿಕ್ಷಣ ತರಬೇತಿ ಕೇಂದ್ರ), ಸಹನಾ ಮಾನ್ವಿ, ರಂಗಯ್ಯ ಸೃಷ್ಟಿ, ಬಿ.ಎಲ್. ಶೆಟ್ಟಿ, ಸಿದ್ದಲಿಂಗಯ್ಯ ಸೊಪ್ಪಿಮಠ, ಕೆ. ನಾಗರಾಜ್, ಡಾ॥ ಬಿ.ಎಚ್. ದಿವಟರ್, ಶಿವರಾಜ್ ಇತ್ಲಿ, ಸೋಮಶೇಖರ್, ವಿಜಯಲಕ್ಷ್ಮಿ ಹಿರೇಮಠ, ನಿವೇದಿತ ಬುಳ್ಳ, ವಿನೋದ ಸಿಂಧನೂರ, ಚಂದ್ರಶೇಖರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕ್ವಿಜ್ ಸ್ಪರ್ಧೆಯಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ, ಶೀಲ್ಡ್ ಹಾಗೂ ಬಹುಮಾನಗಳನ್ನು ನೀಡಲಾಯಿತು. ಜೊತೆಗೆ ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲಾ ವಿದ್ಯಾರ್ಥಿಗಳಿಗೆ ಸಮಾಧಾನಕರ ಬಹುಮಾನ ಹಾಗೂ ಪ್ರಮಾಣ ಪತ್ರ ನೀಡಲಾಗುವುದು ಎಂದು ಆಯೋಜಕರು ತಿಳಿಸಿದರು. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅಧ್ಯಕ್ಷರಾದ ವೀರೇಶ ಹಿರೇಮಠ ಅವರು, ವಿದ್ಯಾರ್ಥಿಗಳು ಶ್ರಮಪಟ್ಟು ಅಧ್ಯಯನ ಮಾಡಿ ತಮ್ಮ ಜೀವನವನ್ನು ರೂಪಿಸಿಕೊಳ್ಳಬೇಕು. ಸ್ವಾಮಿ ವಿವೇಕಾನಂದರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಆತ್ಮವಿಶ್ವಾಸದಿಂದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಬೇಕು. ಉತ್ತಮ ಕೌಶಲ್ಯಗಳನ್ನು ಬೆಳೆಸಿಕೊಂಡಾಗ ಮಾತ್ರ ಜೀವನದಲ್ಲಿ ಯಶಸ್ಸು ಸಾಧಿಸಲು ಸಾಧ್ಯ ಎಂದು ತಿಳಿಸಿದರು. ಇದೇ ವೇಳೆ, ತಂದೆ-ತಾಯಿಗಳು ಹಾಗೂ ಶಿಕ್ಷಕರು ಪಾಠಗಳ ಜೊತೆಗೆ ಮಕ್ಕಳಿಗೆ ಜೀವನ ಮೌಲ್ಯಗಳು ಮತ್ತು ಗುರಿ ಸಾಧಿಸುವ ಮಾರ್ಗವನ್ನು ಕಲಿಸಿಕೊಡುವುದು ಅತ್ಯಂತ ಮುಖ್ಯವೆಂದು ಅವರು ಅಭಿಪ್ರಾಯಪಟ್ಟರು.

# ಕಾಂಗ್ರೆಸ್ ಪಕ್ಷದಿಂದ ಮನರೇಗಾ ಬಚಾವ್ ಸಂಗ್ರಾಮ್ ಅಭಿಯಾನ ಜ.16 ಕ್ಕೆ ಉಪವಾಸ ಸತ್ಯಾಗ್ರಹ: ಎಂಎಲ್ಸಿ

❑ ನೈಜ್ಯ ದೆಸೆ ನ್ಯೂಸ್

**ಕಾಂಗ್ರೆಸ್ ಪಕ್ಷದಿಂದ ರಾಜ್ಯದಾದ್ಯಂತ 'ಮನರೇಗಾ ಬಚಾವ್ ಸಂಗ್ರಾಮ್' ಜನಾಂದೋಲನ ರೂಪಿಸಿ, ಯುಪಿಎ ಜಾರಿಗೆ ತಂದ ಕಾರ್ಯಕ್ರಮಗಳನ್ನು ರದ್ದು ಮಾಡಿ ಉದ್ಯೋಗದ ಹಕ್ಕು ಕಸಿದುಕೊಳ್ಳಲು ಕೇಂದ್ರ, ಸರ್ಕಾರ ನಡೆಸಿದ ಬಾರಿ ಸಂಚಿನ ವಿರುದ್ದ ತಾಲೂಕು ಕಾಂಗ್ರೆಸ್ ಸಮಿತಿಯಿಂದ ಜ.16 ರಂದು ತಹಶೀಲ್ದಾರ್ ಕಚೇರಿ ಮುಂದೆ ಒಂದು ದಿನದ ಉಪವಾಸ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ವಿಧಾನ ಪರಿಷತ್ ಶಾಸಕ ಬಸನಗೌಡ ಬಾದರ್ಲಿ ಹೇಳಿದರು.**

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಪ್ರಧಾನಮಂತ್ರಿ ಮನಮೋಹನ್ ಸಿಂಗ್ ಅಧಿಕಾರದ ಅವಧಿಯಲ್ಲಿ ರಾಷ್ಟ್ರಪಿತ ಮಹಾತ್ಮಗಾಂಧೀಜಿ ಅವರ ಹೆಸರಿನಲ್ಲಿ 'ರಾಷ್ಟ್ರೀಯ




ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ' ಹೆಸರನ್ನು ಜಾರಿಗೆ ತಂದಿತ್ತು. ಕೇಂದ್ರ ಬಿಜೆಪಿ ಸರ್ಕಾರ ಸಂಪೂರ್ಣ ಬದಲಾಯಿಸಿ, ಬಡಜನರ ಉದ್ಯೋಗದ ಹಕ್ಕನ್ನು ಕಿತ್ತಿಕೊಳ್ಳುವ ಕೆಲಸವನ್ನು ಮಾಡುತ್ತಿದೆ. ಇದನ್ನು ವಿರೋಧಿಸಲು ನಮ್ಮ ಕಾಂಗ್ರೆಸ್ ಪಕ್ಷ ನಿದರ್ಶನ ನೀಡಿದೆ. ಸಿಂಧನೂರು ತಾಲೂಕಿನ ಪ್ರತಿ ಗ್ರಾ.ಪಂ.ಮಟ್ಟದಲ್ಲಿ ಜ.18 ರಿಂದ 29 ವರೆಗೆ 'ಜನ ಸಂಪರ್ಕ ಸಭೆ' ಮತ್ತು ಜ.29 ತಾಲೂಕು ಕಾಂಗ್ರೆಸ್ ಸಮಿತಿ ವತಿಯಿಂದ 5 ಕಿ.ಮೀ. ಪಾದಯಾತ್ರೆ ಹಮ್ಮಿಕೊಳ್ಳಲಾಗುತ್ತಿದೆ.

ಡಾ.ಬಿ.ಆರ್.ಅಂಬೇಡ್ಕರ್ ಅವರ ಸಂವಿಧಾನದ ಅಡಿಯಲ್ಲಿ ಪ್ರತಿಯೊಬ್ಬರಿಗೂ ಉದ್ಯೋಗ ಪಡೆವ ಹಕ್ಕನ್ನು ಹೊಂದಿದ್ದಾರೆ. ಇದನ್ನು ನಿಷ್ಕ್ರಿಯಗೊಳಿಸುವ ಹುನ್ನಾರ ಪ್ರಧಾನಿ ನರೇಂದ್ರ ಮೋದಿ, ಗೃಹಮಂತ್ರಿ ಅಮಿತ್ ಷಾ ಅವರು ಮಾಡುತ್ತಿದ್ದಾರೆ. ಇದು ಬಡವರ ಹಕ್ಕನ್ನು ಕಿತ್ತಿ ಕೈಗಾರಿಕೆಗಳ ಕೈಗೆ ಕೊಡುವ ಕೆಲಸ ಮತ್ತು ವರ್ಷದ 365 ದಿನದ ಕೆಲಸವನ್ನು 60 ದಿನಕ್ಕೆ ಇಳಿಸಲು ಪ್ರಯತ್ನ ಇದಾಗಿದ್ದು, ನಿರುದ್ಯೋಗ ತಾಂಡವಾಡಲು ಮಾಡುವ ಹುನ್ನಾರ ಎಂದು ಆರೋಪಿಸಿದರು. ಈ ವೇಳೆ: ಶಿವಕುಮಾರ ಜವಳಿ, ವೆಂಕಟೇಶ ರಾಗಲಪರ್ವಿ, ಶರಣಯ್ಯಸ್ವಾಮಿ ಕೋಟೆ, ವೀರರಾಜ, ಅಮರೇಶ ಗಿರಿಜಾಲಿ, ಅಬಿಬ್, ಖಾಜಾಸಾಬ್ ರೌಡಕುಂದ, ಯುಸೂಫ್ ಏತ್ಮಾರಿ, ಸೇರಿದಂತೆ ಅನೇಕರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಮಾನವೀಯ ಮೌಲ್ಯಗಳನ್ನು ಉಳಿಸುವ ಕೆಲಸ ಕಾರುಣ್ಯಾಶ್ರಮವು ಮಾಡುತ್ತಿರುವುದು ನಮ್ಮೆಲ್ಲರಿಗೆ ಸಂತೋಷವೆನಿಸಿದೆ :ಗಜದಂಡ ಶಿವಾಚಾರ್ಯರು

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಲಿಂಗಸೂಗೂರು ಪಟ್ಟಣದ ಐ.ಎಂ.ಎ. ಹಾಲ್ ನಲ್ಲಿ ಕಾರುಣ್ಯ ನೆರೆ ವೃದ್ಧಾಶ್ರಮ ಸಿಂಧನೂರು ಹಾಗೂ ಸ್ವಾಮಿ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಕೆಲವು ದಿನಗಳ ಹಿಂದೆ ಅಮೆರಿಕನ್ ವಿಜಡಮ್ ಯೂನಿವರ್ಸಿಟಿಯಿಂದ "ಗೌರವ ಡಾಕ್ಟರೇಟ್ " ಸ್ವೀಕರಿಸಿದ್ದ ಡಾ. ಮಲ್ಲಿಕಾರ್ಜುನ ಸ್ವಾಮಿ ಹಿರೇಮಠ ಅವರಿಗೆ ಅಭಿನಂದನಾ ಸಮಾರಂಭ " ಚಿಂತನೆಗಳ ಸಂಗ್ರಹ" ಕೃತಿ ಬಿಡುಗಡೆ ಹಾಗೂ ಪ್ರಶಸ್ತಿ ಪ್ರಧಾನ ಸಮಾರಂಭ ಸಂಗೀತ ಸಾಂಸ್ಕೃತಿಗೆ ಕಾರ್ಯಕ್ರಮಗಳ ಕಾರ್ಯಕ್ರಮವು ವಿವಿಧ ಮಠಾಧೀಶರ ಗಣ್ಯಾತಿಗಣ್ಯರ ಮತ್ತು ಹಲವಾರು ಸಾಧಕರ ಸಮಾಗಮದಲ್ಲಿ ಕಾರ್ಯಕ್ರಮ ಅರ್ಥಪೂರ್ಣವಾಗಿ ನೆರವೇರಿತು.**

ಈ ಕಾರ್ಯಕ್ರಮದಲ್ಲಿ ಡಾ. ಮಲ್ಲಿಕಾರ್ಜುನ ಸ್ವಾಮಿ ಹಿರೇಮಠ ಕರಡಕಲ್ ಅವರಿಗೆ ವಿವಿಧ ಸಂಘ-ಸಂಸ್ಥೆಗಳು ಮತ್ತು ಹರ ಗುರು ಚರ ಮೂರ್ತಿಗಳು ಅಭಿನಂದಿಸಿದರು. ಈ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿದ್ದ ಗುರುಗುಂಟಾ ಸುಕ್ಷೇತ್ರದ ಶ್ರೀ ಅಮರೇಶ್ವರ ಗುರು ಶ್ರೀ ಷ.ಬ್ರ. ಗಜದಂಡ ಶಿವಾಚಾರ್ಯ ಮಹಾಸ್ವಾಮಿಗಳು ಇಂದಿನ ಈ ಕಾರ್ಯಕ್ರಮದಲ್ಲಿ ಅಂಗವಿಕಲರಾದ ಮಲ್ಲಿಕಾರ್ಜುನ ಸ್ವಾಮಿಯವರು ಸಿಂಧನೂರಿನ ಕಾರುಣ್ಯ ಆಶ್ರಮದ ಸದಸ್ಯರಾಗಿ ಮತ್ತು ನಮ್ಮ ಲಿಂಗಸೂಗೂರು ಭಾಗದಲ್ಲಿ ನಿರಂತರ ಸಮಾಜ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿರುವುದು ನಾಡಿನ ಎಲ್ಲಾ ಹರ-ಗುರು ಚರಮೂರ್ತಿಗಳ ಪ್ರೀತಿಗೆ ಪಾತ್ರರಾಗಿದ್ದಾರೆ.



ಹುಟ್ಟು ಅಂಗವಿಕಲರಾದ ಇವರು ಮಾಡುತ್ತಿರುವ ಸಮಾಜ ಸೇವೆ ಸಮಾಜಕ್ಕೆ ಮಾದರಿಯಾಗಿದೆ. ನಮ್ಮ ಸಿಂಧನೂರಿನ ಕಾರುಣ್ಯಾಶ್ರಮವು ಅನಾಥಾಶ್ರಮ ನಡೆಸುವುದಲ್ಲದೆ ಜನರಲ್ಲಿ ಜಾಗೃತಿ ಮೂಡಿಸುತ್ತಿದೆ. ಮಕ್ಕಳಾದವರು ಹೆತ್ತವರನ್ನು ನೋಡಿಕೊಳ್ಳಲೇಬೇಕು ಎನ್ನು ಹಲವಾರು ಅಭಿಯಾನಗಳನ್ನು ಜಾಗೃತಿಗಳನ್ನು ಮಾಡಿ ಮಾಡುತ್ತಿರುವ ಕಾರುಣ್ಯಾಶ್ರಮದ ಸೇವೆ ಶ್ಲಾಘನೀಯ. ಈ ಭಾಗದಲ್ಲಿ ಸುಮಾರು ವರ್ಷಗಳಿಂದ ಹಲವಾರು ಸಮಾಜ ಸೇವಕರುಗಳಿಗೆ ಕಾರುಣ್ಯ ಕುಟುಂಬವು ಸ್ಫೂರ್ತಿಯಾಗಿದೆ. ಮಾನವೀಯ ಮೌಲ್ಯಗಳನ್ನು ಉಳಿಸುವ ಕೆಲಸ ಕಾರುಣ್ಯಾಶ್ರಮವು ಮಾಡುತ್ತಿರುವುದು ನಮ್ಮೆಲ್ಲರಿಗೆ ಸಂತೋಷವೆನಿಸಿದೆ. ಇಂತಹ ಕಾರ್ಯಗಳಿಗೆ ಪ್ರತಿಯೊಬ್ಬರು ಕೂಡ ಸಹಾಯ ಸಹಕಾರ ಮಾಡಿದರೆ ಸಮಾಜಕ್ಕೆ ಇನ್ನೂ ಸೇವೆ ದೊರೆಯಲಿದೆ.

ನಾನು ನನ್ನದು ಎನ್ನುವ ಭಾರತದ ಈ ಜಗತ್ತಿನಲ್ಲಿ ನಿಸ್ವಾರ್ಥತೆಯ ಪಯಣದಲ್ಲಿ ಸಾಗುತ್ತಿರುವ ಕಾರುಣ್ಯ ಆಶ್ರಮಕ್ಕೆ ನಾಡಿನ ಎಲ್ಲಾ ಹರ-ಗುರು ಚರಮೂರ್ತಿಗಳ ಶುಭಾಶಿರ್ವಾದವಿರುತ್ತದೆ.

ನಮ್ಮ ಮಲ್ಲಿಕಾರ್ಜುನ ಸ್ವಾಮಿ ಕರಡಕಲ್ ಅವರಿಗೆ ಇಂದಿನ ಈ ಸಮಾರಂಭದಲ್ಲಿ ಹಲವಾರು ವಿವಿಧ ಸಂಘ ಸಂಸ್ಥೆಗಳು ಮತ್ತು ಅಭಿಮಾನಿಗಳು ಶಿಷ್ಯರು ಅಭಿನಂದಿಸುತ್ತಿರುವುದು ಮತ್ತು ರಾಜ್ಯದ ಮೂಲೆ ಮೂಲೆಗಳಲ್ಲಿನ ವಿಶೇಷ ಸಾಧಕರುಗಳಿಗೆ ಪ್ರಶಸ್ತಿ ಪ್ರಧಾನ ಮಾಡುವ ಈ ಕಾರ್ಯಕ್ರಮ ಸಮಾಜಕ್ಕೆ ಮಾದರಿಯಾಗಿದೆ ಎಂದು ಆಶೀರ್ವಚನ ನೀಡಿದರು. ನಂತರ ಸಿಂಧನೂರು ತಾಲೂಕಿನ ಸಿದ್ಧಾಶ್ರಮದ ಡಾ. ಸಿದ್ದರಾಮೇಶ್ವರ ಶರಣರು ಉಮಾದೇವಿ ಮಡಿವಾಳಯ್ಯ ಹಿರೇಮಠ ಈ ಆದರ್ಶ ದಂಪತಿಗಳ ಮಗನಾದ ಡಾ. ಮಲ್ಲಿಕಾರ್ಜುನ ಸ್ವಾಮಿ ಅವರು ವಿಶೇಷ ಚೇತನರಾಗಿದ್ದರು ಕೂಡ ಸಮಾಜದ ಬಗ್ಗೆ ಕಳಕಳಿಯನ್ನು ಹೊಂದಿ ಸಮಾಜಕ್ಕೆ ತಮ್ಮನ್ನು ತಾವು ಅರ್ಪಣೆ ಮಾಡಿಕೊಂಡಿರುವುದು ಕಾರುಣ್ಯ ಎನ್ನುವ ಪದಕ್ಕೆ ಸಂಪೂರ್ಣ ಅರ್ಥ ಕಲ್ಪಿಸಿ ಕೊಟ್ಟಿದ್ದಾರೆ.

ಕರುಣೆಯ ಕಾರುಣ್ಯ ಮೂರ್ತಿಗಳಾಗಿ ನೊಂದವರಿಗೆ ನಾಡಿಮಿಡಿತವಾಗಿ ಅನಾಥ ಜೀವಿಗಳ ಮಧ್ಯೆ ಬದುಕು ಕಟ್ಟಿ ಕೊಂಡಿರುವ ಇವರಿಗೆ ನಮ್ಮ ಆಶೀರ್ವಾದವಿರುತ್ತದೆ ಮತ್ತು ಇವರ ಮಾತೋಶ್ರೀ ಅವರಿಗೆ ನಮ್ಮ ಆಶ್ರಮದ ವತಿಯಿಂದ ಧನ್ಯವಾದಗಳು. ಇಂದು ಪ್ರಶಸ್ತಿ ಸ್ವೀಕಾರ ಮಾಡುವಂತ ಪ್ರತಿಯೊಬ್ಬ ಸಾಧಕರು ಕೂಡ ಸಮಾಜದ ಬಹುದೊಡ್ಡ ಆಸ್ತಿಯಾಗಿ ನಮ್ಮ ನಾಡಿನ ಸಂಸ್ಕೃತಿ ಸಂಸ್ಕಾರ ಪರಂಪರೆ ಇತಿಹಾಸವನ್ನು ಉಳಿಸುವ ನಿಟ್ಟಿನಲ್ಲಿ ಇನ್ನೂ ಹೆಚ್ಚಿನ ಸೇವೆ ತಮ್ಮ ಮೂಲಕ ಸಮಾಜಕ್ಕೆ ದೊರೆಯಲಿ ಎನ್ನುವುದು ನಮ್ಮ ಆಶಯ ಎಂದು ಆಶೀರ್ವಚನ ನೀಡಿದರು. ಈ ಕಾರ್ಯಕ್ರಮವನ್ನು ಸಂಗೀತ ನಾಡಗೌಡ ಮುದ್ದೇಬಿಹಾ ರಾಷ್ಟ್ರೀಯ ಮಹಿಳಾ ಕಾಂಗ್ರೆಸ್ ಮುಖಂಡರು ಉದ್ಘಾಟಿಸಿದರು. ವೇ.ಮೂ.ವೀರೇಶ ಯಡಿಯೂರು ಮಠ ಶ್ರೀ ಶಾಂಭವಿ ಪುಣ್ಯಾಶ್ರಮ ಸಿಂಧನೂರು ವೇ.ಮೂ. ಡಾ. ಕಾಡಯ್ಯ ಹಿರೇಮಠ ಶ್ರೀ ದುರ್ಗಾಪರಮೇಶ್ವರಿ ಮತ್ತು ಶ್ರೀ ಕಾಳಿಕಾ ದೇವಿ ಆರಾಧಕರು ದಿಗ್ಗೆವಾಡಿ ಬೆಳಗಾವಿ ಇವರುಗಳು ಸಾನಿಧ್ಯ ವಹಿಸಿದ್ದರು.

ಶ್ರೀ ಮತಿ ಉಮಾದೇವಿ ಹಿರೇಮಠ ಸಂಸ್ಥಾಪಕರು ಸ್ವಾಮಿ ಚಾರಿಟಬಲ್ ಟ್ರಸ್ಟ್ ಹಾಗೂ ವೇ.ಮೂ. ಅಮರಯ್ಯ ಸ್ವಾಮಿ ಹಿರೇಮಠ ಹರೇಟನೂರು. ಸಂಸ್ಥಾಪಕರು ಕಾರುಣ್ಯ ನೆಲೆ ವೃದ್ಧಾಶ್ರಮ ಸಿಂಧನೂರು ಇವರುಗಳು ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಅಡವಿ ಸ್ವಾಮಿ ಹಿರೇಮಠ ಬಳ್ಳಾರಿ ರಾಜ್ಯ ಕಾರ್ಯದರ್ಶಿಗಳು ಬಿಜೆಪಿ ಯುವ ಮೋರ್ಚಾ. ಭೂಪನಗೌಡ ಪಾಟೀಲ್ ಅಧ್ಯಕ್ಷರು ನಗರಾಭಿವೃದ್ಧಿ ಲಿಂಗಸೂಗೂರು. ಗಿರಿ ಮಲ್ಲನಗೌಡ ಮಾಲಿಪಾಟೀಲ್ ಬಿಜೆಪಿ ಮುಖಂಡರು ಕರಡಕಲ್.ಮಾರುತಿ ಎಮ್ ವಜ್ಜಲ್ ಬಿಜೆಪಿ ಯುವ ಮುಖಂಡರು ಲಿಂಗಸೂಗೂರು.

ಬಸವರಾಜ ನಾಯಕ ವಾಲ್ಮೀಕಿ ಸಮಾಜದ ಮುಖಂಡರು ಗುರುಗುಂಟಾ. ವೀರನಗೌಡ ಬಾದರ್ಲಿ ಪ್ರಗತಿಪರ ಕೃಷಿ ಚಿಂತಕರು ಸಿಂಧನೂರು. ಡಾ.ನಾಗವೇಣಿ.ಎಸ್. ಪಾಟೀಲ್ ರಾಜ್ಯ ಪ್ರಧಾನ ಕಾರ್ಯದರ್ಶಿಗಳು ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ಸಮಿತಿ. ಡಾ. ಸಿ.ಬಿ. ವಿರಕ್ತ ಮಠ ಆಯುಷ್ ಆರೋಗ್ಯಾಧಿಕಾರಿಗಳು ಸಿ. ಎಚ್. ಸಿ. ನಾಲತವಾಡ. ಹಾಗೂ ಕಾರುಣ್ಯ ಆಶ್ರಮದ ಪದಾಧಿಕಾರಿಗಳಾದ ಕರಿಬಸಯ್ಯ ಸ್ವಾಮಿ ಉಪಾಧ್ಯಕ್ಷರು. ಕೆ.ಸಂಗನಗೌಡ ಖಜಾಂಚಿಗಳು. ಕ. ಚಿದಾನಂದಪ್ಪ ಗೌಡ ಕಾರ್ಯದರ್ಶಿಗಳು. ಕೆ.ಶರಣಪ್ಪ ಸದಸ್ಯರು ಮಂಜುನಾಥ ಮಾಲಿ ಪಾಟೀಲ್ ಸದಸ್ಯರು. ಸುಜಾತ ಹಿರೇಮಠ ಸದಸ್ಯರು. ಉಪಸ್ಥಿತಿ ವಹಿಸಿದ್ದರು. ಡಾ. ಚನ್ನಬಸಯ್ಯಸ್ವಾಮಿ ಹಿರೇಮಠ ಪ್ರಾಸ್ತಾವಕವಾಗಿ ಮಾತನಾಡಿದರು. ಅಣ್ಣಪ್ಪಗೌಡ ಮೇಟಿ ಗೌಡ್ರು ಕಾರ್ಯಕ್ರಮವನ್ನು ನಿರೂಪಿಸಿದರು. ಮಂಜುನಾಥ ಗಾಣಿಗರ ಸ್ವಾಗತಿಸಿದರು ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಸಾಧಕರುಗಳು ಪ್ರಶಸ್ತಿ ಸ್ವೀಕರಿಸಿದರು. ಕಾರ್ಯಕ್ರಮದಲ್ಲಿ ಅನೇಕ ವಿವಿಧ ಸಂಘ ಸಂಸ್ಥೆಗಳ ಮುಖಂಡರುಗಳು ಮತ್ತು ಸಾರ್ವಜನಿಕರು ಭಾಗವಹಿಸಿದ್ದರು.